ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 251 RNI Number : KNKAN/25/A2770 23-09-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:251 ರಾಯಚೂರು 23-09-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಕಸ್ತೂರಿ ರಂಗನ್ ವರದಿ ವಿರುದ್ಧ ಸರ್ವಾನುಮತದ ನಿರ್ಣಯ ಅಂಗೀಕಾರ

ಬೆಂಗಳೂರು: ಕಸ್ತೂರಿ ರಂಗನ್ ವರದಿ ಸಂಬಂಧ ಹೊರಡಿಸಲಾಗಿರುವ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪದಿರಲು ತೀರ್ಮಾನಿಸಿದ್ದು, ಆರು ಅಂಶಗಳ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು. ಪ್ರಮುಖವಾಗಿ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಿ, ಕಸ್ತೂರಿ ರಂಗನ್ ವರದಿಯ ನ್ಯೂನತೆಗಳನ್ನು ಸರಿಪಡಿಸಿ ಸೂಕ್ತ ಮಾರ್ಪಾಡುಗಳನ್ನು ಸೂಚಿಸಲು ಕ್ರಮ ಹಾಗೂ ಭೌತಿಕವಾಗಿ ಸರ್ವೆ ನಂಬರ್‌ವಾರು ಅಳತೆಯನ್ನು ರಾಜ್ಯ ಸರ್ಕಾರದಿಂದ ಮಾಡಲು ನಿರ್ಣಯಿಸಲಾಗಿದೆ.

ಪಶ್ಚಿಮ ಘಟ್ಟ ಮೇಲಿನ ಕಸ್ತೂರಿ ರಂಗನ್ ವರದಿ ಸಂಬಂಧ ಚರ್ಚೆಗೆ ಉತ್ತರಿಸಿದ ಸಿಎಂ ಡಿ.ಕೆ.ಶಿವಕುಮಾರ್, ನಮಗೆ ಪರಿಸರ ಉಳಿಯಬೇಕು. ಕಾಡಿದ್ದರೆ ನಾಡು, ಕಾಡಿದ್ದರೆ ಮಳೆ. ಹಾಗಂತ ರೈತರನ್ನೂ ಉಳಿಸಬೇಕು. ಕಾಡು ಉಳಿಯಬೇಕು. ಗ್ರಾಮಮಟ್ಟದಲ್ಲಿ ಪರಿಶೀಲನೆ ಮಾಡುವಂತೆ ಅಭಿಪ್ರಾಯ ವ್ಯಕ್ತವಾಗಿದೆ. ಅದಕ್ಕೆ ನಮ್ಮ ಒಪ್ಪಿಗೆ ಇದೆ. ಕೃಷಿ ಮತ್ತು ತೋಟಗಾರಿಕೆ ಮುಂಚಿತರ ನಡೆಯಬೇಕು. ರಸ್ತೆ, ಆಸ್ಪತ್ರೆಗಳು ಇವೆ. ಅವುಗಳ ರಕ್ಷಣೆ ನಮ್ಮದು ಹಾಗೂ ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ ಎಂದಿದ್ದಾರೆ.

ಹಿರಿಯ ವಕೀಲರ ನೇಮಕಕ್ಕೆ ತೀರ್ಮಾನ, ಕೇಂದ್ರಕ್ಕೆ ನಿಯೋಗ: ಇದರಿಂದ ಉತ್ತರ ಕನ್ನಡ, ಮೈಸೂರು, ಬೆಳಗಾವಿ, ಉಡುಪಿ, ಚಿಕ್ಕಮಗಳೂರು,



ಶಿವಮೊಗ್ಗದಲ್ಲಿ ಸಮಸ್ಯೆ ಆಗುತ್ತದೆ. ಸಾಮಾನ್ಯ ಜನರ ಹಿತ ಕಾಯಲು ಬದ್ಧವಾಗಿದೆ. ಕೇಂದ್ರ ಸರ್ಕಾರಕ್ಕೆ ತಕ್ಷಣ ಅರ್ಜಿ ಸಲ್ಲಿಸುವ ಅನಿವಾರ್ಯತೆ ಇದೆ. ಎಲ್ಲಾ ಸದಸ್ಯರ ಅಭಿಪ್ರಾಯವನ್ನು ಪಡೆಯಲಾಗಿದೆ. ಕೇರಳ ಮಾದರಿ ವೈಜ್ಞಾನಿಕ ಸಮೀಕ್ಷೆ ಮಾಡಬೇಕು. ಕಾನೂನು ಹೋರಾಟ ಮಾಡಲು ತೀರ್ಮಾನ ಆಗಿದೆ. ಜನರ ಬದುಕಿಗೆ ನಾವು ತೊಂದರೆ ಕೊಡಬಾರದು. ಗ್ರಾಮ ಮಟ್ಟದಲ್ಲಿ, ಸರ್ವೆ ಸಂಖ್ಯೆವಾರು ಬೌತಿಕ ಸರ್ವೆ ಆಗಬೇಕು ಎಂಬುದು ಎಲ್ಲರ ಅಭಿಪ್ರಾಯ ಇದೆ. ಸುಪ್ರೀಂ ಕೋರ್ಟ್ ಗೆ ಹಿರಿಯ ವಕೀಲರನ್ನು ನೇಮಕ ಮಾಡಲೂ ತೀರ್ಮಾನಿಸಲಾಗಿದೆ. ಕೇಂದ್ರಕ್ಕೆ ನಿಯೋಗ ಕರೆದೊಯ್ಯೋಣ, ಕೇಂದ್ರ ಅರಣ್ಯ ಸಚಿವರು, ಪ್ರಧಾನಿಯನ್ನು ಭೇಟಿ ಮಾಡೋಣ. ಎಲ್ಲರೂ ಒಕ್ಕೊರಲಿನಿಂದ ಹೋರಾಟ ಮಾಡಬೇಕಾಗಿದೆ. ನಮ್ಮ ಸಂಸದರು ಈ ಬಗ್ಗೆ ಬಾಯಿ ಬಿಡಬೇಕು. ರೈತರು ಉಳಿಯಬೇಕು. ಜನ ಸಾಮಾನ್ಯರು ಉಳಿಯಬೇಕು. ರಾಜಕಾರಣ ಮಾಡುವುದು ಬೇಡ ಎಂದರು.

ಸದನದ ನಿರ್ಣಯ ಏನು?: ಪರಿಸರ ಸೂಕ್ಷ್ಮ ಪ್ರದೇಶ () ವ್ಯಾಪ್ತಿಯಲ್ಲಿ ಕೇವಲ ಅಧಿಸೂಚಿತ ಅರಣ್ಯ ಪ್ರದೇಶಗಳು, ಇತರೆ ಅರಣ್ಯ ಪ್ರದೇಶಗಳು ಮಾತ್ರ ಸೇರಿಸಬೇಕು. ಕೃಷಿ ಭೂಮಿ, ತೋಟಗಾರಿಕೆ/ಪ್ಲಾಂಟೇಶನ್ ಪ್ರದೇಶಗಳು, ಜನವಸತಿ ಮತ್ತು ಸಾರ್ವಜನಿಕ ಚಟುವಟಿಕೆ ಪ್ರದೇಶಗಳನ್ನು ಸೇರಿಸಬಾರದು. ಬಗರ್ ಹುಕುಂ, ಅರಣ್ಯ ಹಕ್ಕು, ಡೀಮ್ಸ್ ಫಾರೆಸ್ಟ್, ಭೂ ಮಂಜೂರಾತಿ, ಮೇಲ್ಮನವಿ ಮತ್ತು ನ್ಯಾಯಾಂಗ ಪ್ರಕರಣಗಳನ್ನು ಪರಿಗಣಿಸಬೇಕು. ತಜ್ಞ ಸಮಿತಿಯಿಂದ ಭೌತಿಕವಾಗಿ ಅರಣ್ಯಗಡಿ, ಜನವಸತಿ, ಪರಿಸರ ಸೂಕ್ಷ್ಮ ಪ್ರದೇಶಗಳನ್ನು, ಜನವಸತಿ ಕೃಷಿ ಚಟುವಟಿಕೆ ಪ್ರದೇಶಗಳನ್ನು ಸರ್ವೆ ನಂಬರ್‌ವಾರು ಅಳತೆ ಮಾಡಿ ಪ್ರತ್ಯೇಕವಾಗಿ ಗುರುತಿಸಬೇಕು. ನಿಂದಾಗಿ ರೈತರ ಹಾಗೂ ಕಾರ್ಮಿಕರ ಪರ್ಯಾಯ ಜೀವನೋಪಾಯ ಮತ್ತು ಆರ್ಥಿಕ ನೆರವನ್ನು ನೀಡಲು ಸೂಕ್ತ ಮಾರ್ಗಸೂಚಿ ರೂಪಿಸಲು ನಿರ್ಣಯಿಸಲಾಗಿದೆ.

ನಿವೃತ್ತ ನ್ಯಾಯಧೀಶರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆಗೆ ನಿರ್ಣಯ: ರಾಜ್ಯ ಸರ್ಕಾರ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲು ತೀರ್ಮಾನಿಸಲಾಗಿದೆ. ಸಮಿತಿಯಲ್ಲಿ ಕಂದಾಯ ಅಧಿಕಾರಿಗಳು, ಅರಣ್ಯಾಧಿಕಾರಿಗಳು, ರೈತ ಸಮುದಾಯದ ಪ್ರತಿನಿಧಿಗಳು, ಕೈಗಾರಿಕಾ ಉದ್ಯಮಗಳ ಪ್ರತಿನಿಧಿಗಳು, ಅರಣ್ಯ ಮತ್ತು 'ಪರಿಸರಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ಪರಿಣತಿ ಹೊಂದಿರುವ ಶೈಕ್ಷಣಿಕ ಸಂಸ್ಥೆಗಳ ತಜ್ಞರು/ವಿಜ್ಞಾನಿಗಳನ್ನೊಳಗೊಂಡ ಸಮಿತಿ ರಚಿಸಿ, ಕಸ್ತೂರಿ ರಂಗನ್ ವರದಿಯ ನ್ಯೂನತೆಗಳನ್ನು ಸರಿಪಡಿಸಿ ಸೂಕ್ತ ಮಾರ್ಪಾಡುಗಳನ್ನು ಸೂಚಿಸಲು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ.

ಒಂದು ವರ್ಷದ ಕಾಲಾವಕಾಶ ಕೋರಿಕೆ: ಜೊತೆಗೆ ಭೌತಿಕವಾಗಿ ಸರ್ವೆ ನಂಬರ್‌ವಾರು ಅಳತೆ ರಾಜ್ಯ ಸರ್ಕಾರದಿಂದ ಮಾಡಲು ನಿರ್ಧರಿಸಿದ್ದು, ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಸಲುವಾಗಿ, ರಾಜ್ಯ ಸರ್ಕಾರವು ಭಾರತ ಸರ್ಕಾರವನ್ನು ಒಂದು ವರ್ಷದ ಕಾಲಾವಕಾಶ ನೀಡುವಂತೆ ಮನವಿ ಮಾಡಲು ನಿರ್ಣಯಿಸಲಾಗಿದೆ. ಸದರಿ ಅವಧಿಯವರೆಗೆ ಕೇಂದ್ರ ಸರ್ಕಾರ ಅಂತಿಮ ಅಧಿಸೂಚನೆಯನ್ನು ಅಂತಿಮಗೊಳಿಸಬಾರದು.

ರಾಜ್ಯ ಸರ್ಕಾರ ತನ್ನ ವರದಿಯನ್ನು ಸಲ್ಲಿಸಿದ ನಂತರ, ಕೇಂದ್ರ ಸರ್ಕಾರ ರಾಜ್ಯ ಸರ್ಕಾರದೊಂದಿಗೆ ಈ ವಿಷಯದ ಕುರಿತು ವಿವರವಾದ ಚರ್ಚೆ ನಡೆಸಿ,

ಮೂರನೇಯ ಪುಟಕ್ಕೆ

ಆಯುಷ್ ವೈದ್ಯರ ಮೇಲಿನ ದೌರ್ಜನ್ಯ ತಡೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ

ರಾಯಚೂರು: ಆಯುಷ್ ವೈದ್ಯರ ಮೇಲಿನ ದೌರ್ಜನ್ಯ ತಡೆಗಟ್ಟಬೇಕು, ರೋಗಿಗಳಲ್ಲದವರ ದೂರಿನ ಆಧಾರದ ಮೇಲೆ ಪರಿಶೀಲನೆ ನಡೆಸದೆ ತಕ್ಷಣ ಕ್ರಮ ಕೈಗೊಳ್ಳುವ ಪದ್ಧತಿಯನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿ ಆಯುಷ್ ಫೆಡರೇಶನ್ ಆಫ್



ಇಂಡಿಯಾ ವತಿಯಿಂದ ನಗರದ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಮಂಗಳವಾರ ಅನಿರ್ದಿಷ್ಟಾವಧಿ ಧರಣಿ ನಡೆಸಲಾಯಿತು.

ಧರಣಿಯಲ್ಲಿ ಎನ್‌ಸಿಐಎಸ್‌ಎಂ ಮತ್ತು ಎನ್‌ಸಿಎಚ್ ಕಾಯ್ದೆಗಳ ಅನ್ವಯ ಆಯುಷ್ ವೈದ್ಯರು ಕೆಲಸ ನಿರ್ವಹಿಸಲು ಅನುಕೂಲ ಕಲ್ಪಿಸಬೇಕು. ಆಧುನಿಕ ಔಷಧಗಳ ಬಳಕೆಗೆ ಅನುಮತಿ ನೀಡಬೇಕು ಹಾಗೂ ಗೆಜೆಟ್ ಅಧಿಸೂಚನೆಗಳಿಗೆ ಅನುಗುಣವಾಗಿ ಆಯುಷ್ ವೈದ್ಯರ ವೃತ್ತಿಪರ ಹಕ್ಕುಗಳು ಮತ್ತು ಸೇವಾ ವಕಾಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.


ಕೆಪಿಎಂಇ ನೋಂದಣಿ ಮತ್ತು ನವೀಕರಣ, ಫೈರ್ ಎನ್‌ಒಸಿ ಸೇರಿದಂತೆ ಆಯುಷ್ ಕ್ಲಿನಿಕ್‌ಗಳಿಗೆ ಸಂಬಂಧಿಸಿದ ಪ್ರಾಯೋಗಿಕ ಸಮಸ್ಯೆಗಳಿಗೆ ಸರಳ ಹಾಗೂ ಸ್ಪಷ್ಟ ನಿಯಮಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ರಾಜ್ಯ ಆಯುಷ್ ಘಟಕದ ಅಧ್ಯಕ್ಷ ಡಾ. ವೋಹನ್ ಬೆನಕದಾರ್ ಮಾತನಾಡಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಅಲೋಪತಿ ವೈದ್ಯರಂತೆ ಆಯುಷ್ ವೈದ್ಯರಿಗೂ ಸಮಾನ ವೇತನ ನೀಡಬೇಕು. ಎನ್‌ಸಿಐಎಸ್‌ಎಂ ಮಾನ್ಯತೆ ಪಡೆದ ಪದವಿ ಕೋರ್ಸ್‌ಗಳು, ಪಠ್ಯಕ್ರಮ ಹಾಗೂ ವೈದ್ಯಕೀಯ ವ್ಯಾಪ್ತಿಯ ಬಗ್ಗೆ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಅಧಿಕಾರಿಗಳು ಸಮಗ್ರ ಅರಿವು ಹೊಂದಬೇಕು ಎಂದು ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಿಂದ ನೀಡಲಾಗುವ ಆಯುಷ್ ಪದವಿಯ ಕಾನೂನುಬದ್ಧ ವ್ಯಾಪ್ತಿಯನ್ನು ಅಧಿಕಾರಿಗಳು ಅರ್ಥಮಾಡಿಕೊಳ್ಳಬೇಕು. ಆಯುಷ್ ವೈದ್ಯರ ವೃತ್ತಿಪರ ಹಕ್ಕುಗಳಿಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಆನಂದ ಎಸ್. ಕಿರಿಶಾಳ ಮಾತನಾಡಿ, ರೋಗಿಗಳಲ್ಲದವರು ದೂರು ನೀಡಿದ ಕೂಡಲೇ ಆಯುಷ್ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಅಲೋಪತಿ ವೈದ್ಯರ ವಿರುದ್ಧವೂ ದೂರುಗಳಿದ್ದರೂ ತನಿಖೆ ನಡೆಸಲಾಗುತ್ತದೆ. ಆದರೆ ಆಯುಷ್ ವೈದ್ಯರ ಮೇಲಷ್ಟೇ ತ್ವರಿತ

ಮೂರನೇಯ ಪುಟಕ್ಕೆ



ಭೂರಹಿತರಿಗೆ ಭೂಮಿ ಮಂಜೂರು ಮಾಡಲು ಆಗ್ರಹಿಸಿ ಉಪವಾಸ ಸತ್ಯಾಗ್ರಹ

ರಾಯಚೂರು: ವಸತಿ ಹಾಗೂ ಭೂ ರಹಿತರಿಗೆ ಭೂಮಿ ಮಂಜೂರು ಮಾಡಿ ಹಕ್ಕುಪತ್ರ ನೀಡಬೇಕು, ಅಧಿಕಾರಿಗಳ ಕಿರುಕುಳ ತಡೆಗಟ್ಟಬೇಕು ಎಂದು ಆಗ್ರಹಿಸಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ನೇತೃತ್ವದಲ್ಲಿ ನಗರದ ಟಿಪ್ಪು ಸುಲ್ತಾನ್ ಉದ್ಯಾನದಲ್ಲಿ ಮೂವರು ಸಂತ್ರಸ್ತರು ಅಮರಣಾಂತ ಉಪವಾಸ ಸತ್ಯಾಗ್ರಹ ಆರಂಭಿಸಿದ್ದಾರೆ.

ಪ್ರತಿಭಟನಾಕಾರರು ಮಸ್ಕಿ ತಾಲೂಕಿನ ಹಾಲಾಪುರ ಹೋಬಳಿಯ ಸುಂಕನೂರು ಸೀಮೆಯ ಸರ್ವೆ ನಂ.68 ಮತ್ತು 69ರ ಪಟ್ಟಾ ಜಮೀನಿನಲ್ಲಿ ಪಟ್ಟಾದಾರರಿಗೆ ಕಿರುಕುಳ ನೀಡಿ ಭೂಮಿ ಕಬಳಿಸಲು ಯತ್ನಿಸುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ವಾರಸುದಾರರಿಗೆ ಪೊಲೀಸ್ ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿದರು.

ಗೂಗೆಬಾಳ ಸೀಮೆಯ ಸರ್ವೆ ನಂ.32 ಹಾಗೂ ತೋರಣದಿನ್ನಿ ಸೀಮೆಯ ಸರ್ವೆ ನಂ.115 ಮತ್ತು 116ರ ಸರ್ಕಾರಿ ಮಂಜೂರಾತಿ ಜಮೀನುಗಳನ್ನು ಅನಧಿಕೃತ ವ್ಯಕ್ತಿಗಳಿಂದ ತೆರವುಗೊಳಿಸಿ, ಸರ್ವೆ

ಮೂರನೇಯ ಪುಟಕ್ಕೆ

ಡಿಜೆ ಕೈಬಿಟ್ಟು ಮೃತ ಬಾಲಕರ ಕುಟುಂಬಕ್ಕೆ ನೆರವು ನೀಡಲು ಗಣೇಶ ಮಂಡಳಿ ನಿರ್ಧಾರ

ರಾಯಚೂರು,ಸೆ.22–

ನಗರದ ಸ್ಟೇಷನ್ ಏರಿಯಾದ ಕಾನ್ವೆಂಟ್ ಶಾಲೆ ಹಿಂಭಾಗದಲ್ಲಿರುವ ಅಂಬಾ ಭವಾನಿ ದೇವಿ ಮಂದಿರದ ಗಣೇಶ ಮಂಡಳಿಯ ಸದಸ್ಯರು ಮಾನವೀಯತೆ ಮೆರೆದು ಗಣೇಶ ವಿಸರ್ಜನೆ ವೇಳೆ ಡಿಜೆ ಬಳಕೆ ಕೈಬಿಟ್ಟು, ಅದರ ವೆಚ್ಚವನ್ನು ದುರ್ಘಟನೆಯಲ್ಲಿ ಮೃತಪಟ್ಟ ಇಬ್ಬರು ಬಾಲಕರ ಕುಟುಂಬಕ್ಕೆ ನೀಡಲು ನಿರ್ಧರಿಸಿದ್ದಾರೆ.

ಜಹೀರಾಬಾದ್ ಬಡಾವಣೆಯಲ್ಲಿ 5ನೇ ದಿನದ ಗಣೇಶ ವಿಸರ್ಜನೆ ಸಂದರ್ಭದಲ್ಲಿ ಸಂಭವಿಸಿದ ದುರ್ಘಟನೆಯಲ್ಲಿ ಇಬ್ಬರು ಬಾಲಕರು ಮೃತಪಟ್ಟ ಹಿನ್ನೆಲೆಯಲ್ಲಿ ಮಂಡಳಿಯ ಪ್ರಮುಖರಾದ



ಸುನೀತ್, ಸಾಗರ್ ಹಾಗೂ ಇತರ ಸದಸ್ಯರು ಸಂತಾಪ ಸೂಚಿಸಿದರು. ಮುಂದಿನ ವಿಸರ್ಜನೆ ಸಂದರ್ಭದಲ್ಲಿ ಡಿಜೆ ಬಳಕೆ ಮಾಡದಿರಲು ಹಾಗೂ ಅದಕ್ಕಾಗಿ ಮೀಸಲಿಟ್ಟ ಹಣವನ್ನು ಮೃತ ಬಾಲಕರ ಕುಟುಂಬಕ್ಕೆ ನೆರವಾಗಿ ನೀಡಲು ತೀರ್ಮಾನ ಕೈಗೊಂಡಿದ್ದಾರೆ.

ಇದರ ಜೊತೆಗೆ ಸೋಮವಾರ ಸಂಜೆ ಗಣೇಶ ಪೆಂಡಾಲ್ ಸಮೀಪ ಸುತ್ತಮುತ್ತಲಿನ ನಿವಾಸಿಗಳನ್ನು ಒಗ್ಗೂಡಿಸಿ ಮೇಣದಬತ್ತಿ ಬೆಳಗಿಸುವ ಮೂಲಕ ಮೃತ ಬಾಲಕರ ಆತ್ಮಕ್ಕೆ ಶಾಂತಿ ಕೋರುವ ಕಾರ್ಯಕ್ರಮವನ್ನೂ ಆಯೋಜಿಸಲು ಮಂಡಳಿ ನಿರ್ಧರಿಸಿದೆ.

ಯುವಕರಲ್ಲಿ ಇಂತಹ ಮಾನವೀಯ ನಿರ್ಧಾರ ಮೂಡಲು ಡಿವೈಎಸ್ಪಿ ಶಾಂತವೀರ, ಸಿಪಿಐ ಉಮೇಶ ಕಾಂಬ್ಳೆ ಹಾಗೂ ಪಿಎಸ್‌ಐ ಮಂಜುನಾಥ ಅವರ ಪ್ರೇರಣೆ ಪ್ರಮುಖ ಪಾತ್ರ ವಹಿಸಿದೆ ಎಂದು ಮಂಡಳಿ ತಿಳಿಸಿದೆ.

ಗಣೇಶ ಮಂಡಳಿಯ ಈ ಮಾನವೀಯ ನಿಲುವನ್ನು ಶ್ಲಾಘಿಸಿ ಜಿಲ್ಲಾಧಿಕಾರಿ ಪೂವಿತಾ ಎಸ್. ಹಾಗೂ ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಗಣೇಶ ಪೆಂಡಾಲ್‌ಗೆ ಭೇಟಿ ನೀಡಿ, ಮಂಡಳಿ ಸದಸ್ಯರನ್ನು ಅಭಿನಂದಿಸಿದರು.

ಗಣೇಶ ವಿಸರ್ಜನೆ ವೇಳೆ ದುರಂತ: ಮೃತ ಮಕ್ಕಳ ಕುಟುಂಬಗಳಿಗೆ ಪರಿಹಾರಕ್ಕೆ ಆಗ್ರಹ



ರಾಯಚೂರು: ನಗರದ ವಾರ್ಡ್ ನಂ.13ರ ಜಹೀರಾಬಾದ್ ಬಡಾವಣೆಯಲ್ಲಿ ಗಣೇಶ ವಿಸರ್ಜನೆ ವೇಳೆ ಸಂಭವಿಸಿದ ಟ್ರ್ಯಾಕ್ಟರ್ ಅಪಘಾತದಲ್ಲಿ ಮೃತಪಟ್ಟ ಇಬ್ಬರು ಅಪ್ರಾಪ್ತ ಮಕ್ಕಳು ಹಾಗೂ ಗಂಭೀರವಾಗಿ ಗಾಯಗೊಂಡಿರುವ ಮಗುವಿನ ಕುಟುಂಬಗಳಿಗೆ ಸೂಕ್ತ ಪರಿಹಾರ ಮತ್ತು ಪುನರ್ವಸತಿ ಕಲ್ಪಿಸಬೇಕು ಎಂದು ಭೀಮ್ ಆರ್ಮಿ ಹಾಗೂ ದಲಿತ ಸಂಘರ್ಷ ಸಮಿತಿ (ಡಿಎಸ್‌ಎಸ್) ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಮನವಿಯಲ್ಲಿ ತಿಳಿಸಿರುವಂತೆ, ಸೆಪ್ಟೆಂಬರ್ 18ರಂದು ಮಧ್ಯರಾತ್ರಿ ನಡೆದ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆಯಲ್ಲಿ ಟ್ರ್ಯಾಕ್ಟರ್‌ನಿಂದ ಆಯತಪ್ಪಿ ಬಿದ್ದ ಮೂವರು ಮಕ್ಕಳು ಚಕ್ರಕ್ಕೆ ಸಿಲುಕಿದ್ದರು. ಈ ದುರ್ಘಟನೆಯಲ್ಲಿ ಸುಚಿತ್ ಕುಮಾರ (12) ಮತ್ತು ಚರಣ್ ಕುಮಾರ (13) ಮೃತಪಟ್ಟಿದ್ದು, ವಿಜಯಕುಮಾರ ಗಂಭೀರವಾಗಿ ಗಾಯಗೊಂಡು ರಿಮ್ಸ್ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸಂತ್ರಸ್ತ ಕುಟುಂಬಗಳು ಪರಿಶಿಷ್ಟ ಜಾತಿಗೆ ಸೇರಿದ ಅತ್ಯಂತ ಬಡ, ಭೂರಹಿತ ಹಾಗೂ ದಿನಗೂಲಿ ಕಾರ್ಮಿಕ ಕುಟುಂಬಗಳಾಗಿದ್ದು, ಈ ದುರಂತದಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿವೆ. ಹೀಗಾಗಿ ಪ್ರಕರಣವನ್ನು ವಿಶೇಷ ತುರ್ತು ಪ್ರಕರಣವೆಂದು ಪರಿಗಣಿಸಿ ಪರಿಹಾರ ಕಲ್ಪಿಸಬೇಕು ಎಂದು ಮುಖಂಡರು ಆಗ್ರಹಿಸಿದ್ದಾರೆ.

ಮೃತ ಮಕ್ಕಳ ಕುಟುಂಬಗಳಿಗೆ ತಲಾ 10 ಲಕ್ಷ ರೂ. ಹಾಗೂ ಗಾಯಗೊಂಡ ಮಗುವಿನ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರವನ್ನು ಸಿಎಸ್‌ಆರ್ ನಿಧಿಯಿಂದ ನೀಡಬೇಕು. ಜೊತೆಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿ ಹಾಗೂ ಎಸ್‌ಸಿಎಸ್‌ಪಿ/ಟಿಎಸ್‌ಪಿ ಸೇರಿದಂತೆ ವಿವಿಧ ಯೋಜನೆಗಳಡಿ ಹೆಚ್ಚುವರಿ ನೆರವು ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಗಾಯಾಳುವಿಗೆ ರಿಮ್ಸ್ ನಲ್ಲಿ ಸಂಪೂರ್ಣ ಉಚಿತ ಚಿಕಿತ್ಸೆ ನೀಡಬೇಕು. ಅಗತ್ಯವಿದ್ದರೆ ಖಾಸಗಿ ಆಸ್ಪತ್ರೆಯಲ್ಲಿ ಉನ್ನತ ಚಿಕಿತ್ಸೆ ಕಲ್ಪಿಸಬೇಕು. ಮೂರು ಕುಟುಂಬಗಳಿಗೆ ವಸತಿ ಮತ್ತು ಹಕ್ಕುಪತ್ರ, ಭೂರಹಿತ ಕುಟುಂಬಗಳಿಗೆ ಕೃಷಿ ಜಮೀನು, ಮೃತ ಮಕ್ಕಳ ಕುಟುಂಬದ ಒಬ್ಬ ಸದಸ್ಯರಿಗೆ ಉದ್ಯೋಗ ಹಾಗೂ ಅಂತ್ಯೋದಯ (ಎಎವೈ) ಪಡಿತರ ಚೀಟಿ ಸೇರಿದಂತೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಆದ್ಯತೆಯ ಮೇಲೆ ಒದಗಿಸಬೇಕು ಎಂದು ಮನವಿ ಮಾಡಿದ್ದಾರೆ.

ತಹಶೀಲ್ದಾರ್ ಹಾಗೂ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಸ್ಥಳ

ಮೂರನೇಯ ಪುಟಕ್ಕೆ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಎರಡನೇ ದಿನಕ್ಕೆ ಕಾಲಿಟ್ಟ ಹಟ್ಟಿ ಚಿನ್ನದ ಗಣಿ ಕಾರ್ಮಿಕರ ಉಪವಾಸ ಸತ್ಯಾಗ್ರಹ

ಹಟ್ಟಿ ಚಿನ್ನದ ಗಣಿ:

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಂಪನಿಯ ಸಿಬ್ಬಂದಿ ಹಾಗೂ ಕಾರ್ಮಿಕ ಸಂಘದ ವತಿಯಿಂದ ಹಮ್ಮಿಕೊಂಡಿರುವ ಸರದಿ ಉಪವಾಸ ಸತ್ಯಾಗ್ರಹ ಮಂಗಳವಾರ ಎರಡನೇ ದಿನವೂ ಮುಂದುವರಿಯಿತು.

ಎರಡನೇ ದಿನದ ಉಪವಾಸ ಸತ್ಯಾಗ್ರಹದಲ್ಲಿ ಸಂಘದ ಕಾರ್ಯದರ್ಶಿ ಮುಹಮ್ಮದ್ ಹನೀಫ್, ಮೈನುದ್ದೀನ್ ಮಾಲಗತ್ತಿ, ವೆಂಕಟೇಶ್ ಗೂರ್ಕಲ್, ಮೈನುದ್ದೀನ್, ಎಲ್‌ಎಚ್‌ಡಿ ಆಪರೇಟರ್



ಹನುಮಂತರಾಯ ಹೆಬ್ಬಾಳ್, ಎಂ.ಎಸ್.ಮಂಜುನಾಥ ಸೇರಿದಂತೆ ಹಲವು ಕಾರ್ಮಿಕರು ಭಾಗವಹಿಸಿದರು.

ಇದೇ ವೇಳೆ ಅಖಿಲ ಭಾರತ ಜನವಾದಿ ಮಹಿಳಾ ಸಂಘದ ಸದಸ್ಯೆಯರಾದ ವನಜಾಕ್ಷಿ, ರಜಿಯಾಬೇಗಂ, ದುರುಗಮ್ಮ, ಭಾರತಿ, ಲಕ್ಷ್ಮಿ, ಗಾಯತ್ರಿ ಹಾಗೂ ಹುಲಿಗೆಮ್ಮ ಅವರು ಉಪವಾಸ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಕಾರ್ಮಿಕರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

ಸತ್ಯಾಗ್ರಹ ಸ್ಥಳದಲ್ಲಿ ಸಂಘದ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ಕಾರ್ಮಿಕರ ನ್ಯಾಯಸಮ್ಮತ ಬೇಡಿಕೆಗಳು ಈಡೇರುವವರೆಗೆ ಒಗ್ಗಟ್ಟಿನಿಂದ ಹೋರಾಟ ಮುಂದುವರಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಕಾರ್ಮಿಕರ ಬೇಡಿಕೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಈಡೇರಿಸಬೇಕು ಎಂದು ಸಂಘದ ಮುಖಂಡರು ಆಗ್ರಹಿಸಿದರು.



ಸರ್ವರ್ ಸಮಸ್ಯೆ: ಇ-ಕೆವೈಸಿಗೆ 2-3 ತಿಂಗಳ ಕಾಲಾವಕಾಶ ನೀಡಿ

ರಾಯಚೂರು: ಪಡಿತರ ಚೀಟಿದಾರರ ಇ-ಕೆವೈಸಿ ಪ್ರಕ್ರಿಯೆ ಸರ್ವರ್ ಸಮಸ್ಯೆಯಿಂದ ನಿರೀಕ್ಷಿತ ಪ್ರಮಾಣದಲ್ಲಿ ನಡೆಯುತ್ತಿಲ್ಲ. ಹೀಗಾಗಿ ಇ-ಕೆವೈಸಿ ಪೂರ್ಣಗೊಳಿಸಲು ಪಡಿತರ ಚೀಟಿದಾರರಿಗೆ 2ರಿಂದ 3 ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ಆಗ್ರಹಿಸಿದೆ.

ಈ ಕುರಿತು ಸಂಘಟನೆಯ ಜಿಲ್ಲಾಧ್ಯಕ್ಷ ಹೆಚ್. ಸತ್ಯರಾಜ ನೇತೃತ್ವದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ಸರ್ವರ್ ಪದೇಪದೇ ಕೈಕೊಡುತ್ತಿರುವುದರಿಂದ ಒಂದು ದಿನಕ್ಕೆ ಕೇವಲ 5ರಿಂದ 10 ಪಡಿತರ ಚೀಟಿದಾರರ ಇ-ಕೆವೈಸಿ ಮಾತ್ರ ಪೂರ್ಣಗೊಳ್ಳುತ್ತಿದೆ. ಇದರಿಂದ ಪಡಿತರ ಚೀಟಿದಾರರು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದ್ದು, ವಿತರಕರು

ಮೂರನೇಯ ಪುಟಕ್ಕೆ

ಅಫಜಲಪುರದ ಕೆರೆಗಳಿಗೆ ನೀರು ಹರಿಸುವಂತೆ ಆಗ್ರಹಿಸಿ ಪ್ರತಿಭಟನೆ

ಅಫಜಲಪುರ,ಸೆ.22-

ತಾಲೂಕಿನ 13 ಕೆರೆಗಳು ಹಾಗೂ ಕಾಲುವೆಗಳಿಗೆ ನೀರು ಹರಿಸದೆ ಆಳಂದ ತಾಲೂಕಿನ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ ಎಂದು ಆರೋಪಿಸಿ ಅಫಜಲಪುರ ತಾಲೂಕಿನ ರೈತರು ಸೋಮವಾರ ಮಲ್ಲಾಬಾದ್ ಬಳಿ ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಸುಮಾರು ನಾಲ್ಕು ಗಂಟೆಗಳ ಕಾಲ ಪ್ರತಿಭಟನೆ ನಡೆಸಿದರು.

ತಾಲೂಕಿನ ಕೆರೆಗಳು ನೀರಿಲ್ಲದೆ ಬರಿದಾಗಿರುವ ಸಂದರ್ಭದಲ್ಲಿ ಸ್ಥಳೀಯ ಕೆರೆಗಳು ಹಾಗೂ ಕಾಲುವೆಗಳಿಗೆ ಆದ್ಯತೆ ನೀಡದೆ ಆಳಂದ ಭಾಗಕ್ಕೆ ನೀರು ಹರಿಸಿರುವುದು ರೈತರ ಆಕ್ರೋಶಕ್ಕೆ ಕಾರಣವಾಯಿತು.

ಅಫಜಲಪುರ ತಾಲೂಕಿನ ಕೆರೆಗಳಿಗೆ ತಕ್ಷಣ ನೀರು ಹರಿಸಿ ರೈತರ ಬೆಳೆ ಹಾಗೂ ಜಾನುವಾರುಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಮಹಾಂತೇಶ ಜಮಾದಾರ ಮಾತನಾಡಿ, ರೈತರ ಸಮಸ್ಯೆಗಳ ಕುರಿತು ತುರ್ತು ಸಭೆ ಕರೆಯಬೇಕು.



ಅಫಜಲಪುರ ತಾಲೂಕಿನ ಕೆರೆಗಳು ಮತ್ತು ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸಬೇಕು. ಅರ್ಜುಣಗಿ ಗ್ರಾಮದ ಮೂಲಕ ಹಾದುಹೋಗಿರುವ ಮುಖ್ಯ ಪೈಪ್‌ಲೈನ್‌ಗೆ ಜಾಕ್‌ವೆಲ್ ನಿರ್ಮಿಸಬೇಕು. ಕೆರೆಗಳಿಗೆ ಅಳವಡಿಸಿರುವ ಸಣ್ಣ ಗಾತ್ರದ ಪೈಪ್‌ಗಳ ಬದಲಿಗೆ 12 ಇಂಚಿನ ಪೈಪ್ ಅಳವಡಿಸಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳನ್ನು ಒಂದು ತಿಂಗಳೊಳಗೆ ಈಡೇರಿಸದಿದ್ದರೆ ಶಾಸಕರ ಮನೆಗೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ರೈತ ಮುಖಂಡ ಹಾಗೂ ಬಿಜೆಪಿ ಒಬಿಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ ಮಾತನಾಡಿ, ಅಫಜಲ ಪುರದ ಕಾಲುವೆಗಳಿಗೆ ನೀರು ಹರಿಸದೆ ಪಕ್ಕದ ಆಳಂದ ತಾಲೂಕಿನ ಕೆರೆಗಳಿಗೆ ನೀರು ಹರಿಸಿ ರುವುದು ರೈತರಿಗೆ ಮಾಡಿರುವ ಅನ್ಯಾಯ ವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ನಿತಿನ್ ಗುತ್ತೇದಾರ ಮಾತನಾಡಿ, ಅಫಜಲಪುರದಲ್ಲೇ ನೀರಿನ ಕೊರತೆ ಇರುವ ಸಂದರ್ಭದಲ್ಲಿ ಅಧಿಕಾರಿಗಳು ರೈತರ ಹಿತ ಕಾಪಾಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಸೊನ್ನ ಅಣೆಕಟ್ಟೆಗೆ ಮುತ್ತಿಗೆ ಹಾಕುವ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಎಚ್ಚರಿಸಿದರು.

ಕರವೇ ಅಧ್ಯಕ್ಷ ಶ್ರೀಕಾಂತ್ ದಿವಾಣಜಿ ಮಾತನಾಡಿದರು.

ಪ್ರತಿಭಟನಾ ಸ್ಥಳಕ್ಕೆ ತಹಸೀಲ್ದಾರ್ ಸಂಜೀವಕುಮಾರ ದಾಸರ ಹಾಗೂ ನೀರಾವರಿ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ರೈತರೊಂದಿಗೆ ಮಾತುಕತೆ ನಡೆಸಿದರು. ಕೆರೆಗಳಿಗೆ ನೀರು ಹರಿಸುವ ಕುರಿತು ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ ಬಳಿಕ ರೈತರು ಪ್ರತಿಭಟನೆ ಹಿಂಪಡೆದರು.

ಪ್ರತಿಭಟನೆಯಲ್ಲಿ ಸಂತೋಷ ಮಲಗೊಂಡ ಕೆ.ಜಿ. ಪೂಜಾರಿ, ದತ್ತು ಪೂಜಾರಿ, ಮಂಜುನಾಥ ನಯ್ಕೋಡಿ, ಶ್ರೀಶೈಲ ಗೋಳೆ, ಉಮೇಶ್ ಅಂದೋಡಗಿ, ಸೋಮು ನಾಯ್ಕೋಡಿ, ಲತೀಫ್ ಪಟೇಲ್, ಮಹಾಂತಗೌಡ ಪಾಟೀಲ , ಲಕ್ಷ್ಮೀಪುತ್ರ ಜಮಾದಾರ, ಅರವಿಂದ ದೊಡ್ಮನಿ ಸೇರಿದಂತೆ ರೈತ ಸಂಘಟನೆಗಳ ಮುಖಂಡರು, ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಹಾಗೂ ರಾಜಕೀಯ ಮುಖಂಡರು ಉಪಸ್ಥಿತರಿದ್ದರು.


ರೈತ ಮುಖಂಡರೊಂದಿಗೆ ಡಿಸಿ-ಎಸ್‌ಪಿ ಸಭೆ

ಯಾದಗಿರಿ,ಸೆ.22-

ರೈತರ ವಿವಿಧ ಬೇಡಿಕೆಗಳ ಕುರಿತು ಚರ್ಚಿಸಲು ಸೋಮವಾರ ರಾತ್ರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಕಚೇರಿಯಲ್ಲಿ ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ ಹಾಗೂ ಎಸ್‌ಪಿ ಪೃಥ್ವಿಕ್ ಶಂಕರ್ ಅವರು ರೈತ ಮುಖಂಡರೊಂದಿಗೆ ಸುಮಾರು 40 ನಿಮಿಷಗಳ ಕಾಲ ಸಭೆ ನಡೆಸಿದರು.

ಸಭೆಯ ಆರಂಭದಲ್ಲಿ ರೈತ ಮುಖಂಡರಾದ ಮಹೇಶಗೌಡ ಸುಬೇದಾರ, ಮಲ್ಲಣ್ಣ ಪರಿವಾಣ, ಶರಣಬಸವ ಸ್ವಾಮಿ ಬದ್ದೆಪಲ್ಲಿ ಹಾಗೂ ವಿಜಯಕುಮಾರ ಅವರು ರೈತರ ಬೇಡಿಕೆಗಳನ್ನು ಜಿಲ್ಲಾಡಳಿತದ ಗಮನಕ್ಕೆ ತಂದರು.

ಕೆರೆಗಳಿಗೆ ನೀರು ತುಂಬಿಸುವ ವಿಚಾರದಲ್ಲಿ ಜಿಲ್ಲಾಧಿಕಾರಿ ಮತ್ತು ಎಸ್‌ಪಿ ಅವರು ಕೆಬಿಜೆಎನ್‌ಎಲ್ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ವಾಸ್ತವ ಸ್ಥಿತಿಯ ಮಾಹಿತಿ ಪಡೆದುಕೊಂಡರು. ಬಳಿಕ



ಮಂಗಳವಾರ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜಿಲ್ಲಾಡಳಿತದಿಂದ ಸಾಧ್ಯವಾದ ಮಟ್ಟಿಗೆ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಮಲ್ಕಪ್ಪನಹಳ್ಳಿ ಮತ್ತು ಬದ್ದೆಪಲ್ಲಿ ಗ್ರಾಮಗಳಿಗೆ ಬೋರ್‌ವೆಲ್ ಒದಗಿಸುವುದು ಸೇರಿದಂತೆ ಇತರ ಸಮಸ್ಯೆಗಳ ಬಗ್ಗೆಯೂ ರೈತ ಮುಖಂಡರು ಅಧಿಕಾರಿಗಳ ಗಮನ ಸೆಳೆದರು.

ಧರಣಿ ಹಿಂಪಡೆಯುವಂತೆ ಅಧಿಕಾರಿಗಳು ಮನವಿ ಮಾಡಿದ ಹಿನ್ನೆಲೆಯಲ್ಲಿ, ಮಂಗಳವಾರ ನಡೆಯುವ ಸಭೆಯ ಫಲಿತಾಂಶದ ಬಳಿಕ ಪ್ರತಿಭಟನಾಕಾರರ ಸಮ್ಮುಖದಲ್ಲೇ ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ರೈತ ಮುಖಂಡ ಮಹೇಶಗೌಡ ಸುಬೇದಾರ ತಿಳಿಸಿದರು. ಬಳಿಕ ಸಭೆ ಮುಕ್ತಾಯಗೊಂಡಿತು.

ವಿಶ್ವ ಪ್ರವಾಸೋದ್ಯಮ ದಿನಾಚರಣೆ: ರೆಹಮಾನ್ ಪಟೇಲ್‌ಗೆ ಸನ್ಮಾನ



ಕಲಬುರಗಿ,ಸೆ.22-

ಕರ್ನಾಟಕ ಪ್ರವಾಸೋದ್ಯಮ ವೇದಿಕೆ, ಪ್ರವಾಸೋದ್ಯಮ ಇಲಾಖೆ, ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಕಲಬುರಗಿ ಘಟಕದ ಸಹಯೋಗದಲ್ಲಿ ನಗರದ ಬುದ್ಧ ವಿಹಾರದಲ್ಲಿ ಸೋಮವಾರ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮ್ ಶರೀಫ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಕಲಾವಿದ ಹಾಗೂ ಸಂಶೋಧಕ ರೆಹಮಾನ್ ಪಟೇಲ್ ಅವರನ್ನು ಇತ್ತೀಚೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ರಾಷ್ಟ್ರಪತಿ ಭವನದಲ್ಲಿ ಸನ್ಮಾನ ಸ್ವೀಕರಿಸಿದ್ದಕ್ಕಾಗಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕೈಗಾರಿಕೋದ್ಯಮಿ ಶರಣಬಸಪ್ಪ ಪಪ್ಪಾ, ಬೇಬಿ ಮೊಘೇರಾ, ಪ್ಯಾಟ್ರಿಕ್ ಜಾರ್ಜ್, ಇತಿಹಾಸ ತಜ್ಞ ಡಾ. ಎಸ್.ಎಸ್. ವಾಣಿ, ಶಿಕ್ಷಣ ತಜ್ಞ ಸುನೀಲ್ ಕುಮಾರ್ ಹುಡಗಿ, ಉರ್ದು ಸಾಹಿತಿ ಸೈಯದ್ ರೌಫ್ ಖಾದ್ರಿ, ಶಿಕ್ಷಣ ತಜ್ಞ ಶಂಕರಪ್ಪ ಎಸ್. ಹಟ್ಟಿ, ಡಾ. ಸದಾನಂದ ಪೆರ್ಲಾ, ಸಂದೀಪ್, ವಿನಯ್ ಚಿಕಟವಾರ್ ಸೇರಿದಂತೆ ಹಲವು ಗಣ್ಯರು ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕರ್ನಾಟಕ ಪ್ರವಾಸೋದ್ಯಮ ವೇದಿಕೆಯ ಸಂಯೋಜಕ ಸಂಧ್ಯಾ ರಾಜ್ ಸ್ಯಾಮ್ಯುಯೆಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕಲಬುರಗಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಪ್ರವಾಸೋದ್ಯಮ, ಐತಿಹಾಸಿಕ ಪರಂಪರೆ ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ಪರಿಚಯಿಸುವ ಹಾಗೂ ಸಂರಕ್ಷಿಸುವ ಕುರಿತು ವಿಶೇಷವಾಗಿ ಗಮನಹರಿಸ ಲಾಯಿತು.

ಹಾಸ್ಟೆಲ್‌ಗಳ ಬಲವರ್ಧನೆ, ವಿದ್ಯಾರ್ಥಿಗಳ ಹಕ್ಕುಗಳ ರಕ್ಷಣೆಗೆ ಎಸ್‌ಎಫ್‌ಐ ಒತ್ತಾಯ

ಅಫಜಲಪುರ,ಸೆ.22-

ಹಾಸ್ಟೆಲ್‌ಗಳ ಬಲವರ್ಧನೆ, ವಿದ್ಯಾರ್ಥಿಗಳ ಪ್ರಜಾಸತ್ತಾತ್ಮಕ ಹಕ್ಕುಗಳ ರಕ್ಷಣೆ ಹಾಗೂ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಒತ್ತಾಯಿಸಿ ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್‌ಎಫ್‌ಐ) ಅಫಜಲಪುರ ತಾಲ್ಲೂಕು ಘಟಕದ 3ನೇ ತಾಲ್ಲೂಕು ಸಮ್ಮೇಳನ ನಡೆಯಿತು. ಸಮ್ಮೇಳನದ ಅಂಗವಾಗಿ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ಇದಕ್ಕೂ ಮುನ್ನ ಎಸ್‌ಎಫ್‌ಐ ವತಿಯಿಂದ ತಾಲ್ಲೂಕಿನ ಹಾಸ್ಟೆಲ್, ಶಾಲಾ-ಕಾಲೇಜು ಗಳಲ್ಲಿನ ಸಮಸ್ಯೆಗಳು ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು. ತಹಶೀಲ್ದಾರ್ ಕಚೇರಿ ಸಿಬ್ಬಂದಿ ಮನವಿ ಸ್ವೀಕರಿಸಿದರು.

ನಂತರ ಬಸವಣ್ಣ ವೃತ್ತದ ಮೂಲಕ ಶಾರದಾ ಕಲ್ಯಾಣ ಮಂಟಪದವರೆಗೆ ಮೆರವಣಿಗೆ ನಡೆಯಿತು. ಈ ವೇಳೆ ವಿದ್ಯಾರ್ಥಿಗಳ ಹಕ್ಕುಗಳು ಹಾಗೂ ವಿವಿಧ ಬೇಡಿಕೆಗಳ ಪರ ಘೋಷಣೆಗಳನ್ನು ಕೂಗಲಾಯಿತು.

ಶಾರದಾ ಕಲ್ಯಾಣ ಮಂಟಪದಲ್ಲಿ ನಡೆದ



ಬಹಿರಂಗ ಉದ್ಘಾಟನಾ ಸಮಾರಂಭದಲ್ಲಿ ನಿವೃತ್ತ ಉಪನಿರ್ದೇಶಕ ಶಿವಶರಣ ಮುಳೆಗಾಂವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶದ ಅಭಿವೃದ್ಧಿಗೆ ವಿದ್ಯಾರ್ಥಿಗಳು ಉತ್ತಮವಾಗಿ ಅಧ್ಯಯನ ಮಾಡಬೇಕು. ಶಿಕ್ಷಣದ ಜೊತೆಗೆ ಪ್ರಜಾಸತ್ತಾತ್ಮಕವಾಗಿ ಹೋರಾಟ ಮಾಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಸಮಾಜದಲ್ಲಿನ ಅನ್ಯಾಯದ ವಿರುದ್ಧ ಧ್ವನಿ ಎತ್ತಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ಹೇಳಿದರು.

ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಗಣೇಶ ರಾಠೋಡ ಮಾತನಾಡಿ, ವಿದ್ಯಾರ್ಥಿಗಳ ಸಮಸ್ಯೆಗಳ ಪರಿಹಾರಕ್ಕಾಗಿ ಎಸ್‌ಎಫ್‌ಐ ರಾಜ್ಯಾದ್ಯಂತ ಹೋರಾಟ ನಡೆಸುತ್ತಿದೆ. ಹಾಸ್ಟೆಲ್, ಶಾಲಾ-ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಹೋರಾಟ ರೂಪಿಸಲಾಗಿದೆ. 371(ಜೆ) ಅಡಿಯಲ್ಲಿ ಮೀಸಲಾದ ಅನುದಾನವನ್ನು ಶಿಕ್ಷಣ ಕ್ಷೇತ್ರಕ್ಕೆ ಸಮರ್ಪಕವಾಗಿ ಬಳಸಬೇಕು. ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಒತ್ತಾಯಿಸಿದರು.

ಡಿವೈಎಫ್‌ಐ ರಾಜ್ಯ ಅಧ್ಯಕ್ಷೆ ಲವಿತ್ರ ವಸ್ತ್ರದ್ ಮಾತನಾಡಿ, ಸಮಸ್ಯೆಗಳ ಪರಿಹಾರಕ್ಕಾಗಿ ವಿದ್ಯಾರ್ಥಿಗಳು ಸಂಘಟನೆಯೊಂದಿಗೆ ಒಗ್ಗಟ್ಟಿನಿಂದ ಮುನ್ನಡೆಯಬೇಕು. ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.ಸಮ್ಮೇಳನದಲ್ಲಿ ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷ ಸರ್ವೇಶ್ ಮಾವಿನರ್ಕ, ಜಿಲ್ಲಾ ಕಾರ್ಯದರ್ಶಿ ಸುಜಾತಾ, ರಾಜ್ಯ ಸಮಿತಿ ಸದಸ್ಯ ಇಮಾಮ್ ನದಾಫ್, ವಿದ್ಯಾರ್ಥಿ ನಾಯಕ ಪ್ರದೀಪ್ ಮ್ಯಾಗಡಿ, ಸಾಹಿತಿ ಬಿ.ಎಂ. ರಾವ್, ಅಬ್ಬಾಸಲಿ ನದಾಫ್, ನಾಮದೇವ ಕಡಕೋಳ, ಭೀಮರಾವ್ ಗೌರ, ರಮೇಶ್ ಪಾಟೀಲ್, ಶ್ರೀಮಂತ ಬಿರಾದಾರ, ಶಶಿಕಾಂತ್ ಪತ್ತಾರ್ ಶರಣಬಸಪ್ಪ ವಾಲಿಕರ, ಬಿಲಾಲ್ ಅಹ್ಮದ್, ಗುರು ಚಂದಕವಟೆ, ಸಿಐಟಿಯು ಮುಖಂಡರಾದ ಶಾಂತಾ ಘಂಟೆ, ರವಿ ಗೌರ ಹಾಗೂ ರಾಜಕುಮಾರ್ ಬಳ್ಳೂರಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಮ್ಮೇಳನದಲ್ಲಿ ಎಸ್‌ಎಫ್‌ಐ ಅಫಜಲಪುರ ತಾಲ್ಲೂಕಿನ ನೂತನ ಸಮಿತಿಯನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ವಿಠೋಬಾ ಜಾಧವ ಹಾಗೂ ಕಾರ್ಯದರ್ಶಿಯಾಗಿ ಶ್ರೀನಿವಾಸ ಆಯ್ಕೆಯಾಗಿದ್ದಾರೆ. 11 ಪದಾಧಿಕಾರಿಗಳು ಸೇರಿದಂತೆ ಒಟ್ಟು 25 ಸದಸ್ಯರ ನೂತನ ತಾಲ್ಲೂಕು ಸಮಿತಿಯನ್ನು ರಚಿಸಲಾಯಿತು.

ಬರ ಪರಿಹಾರ, ರೈತರ ಸಾಲಮನ್ನಾಕ್ಕೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

ಅಫಜಲಪುರ ,ಸೆ.22-

ರಾಜ್ಯದಲ್ಲಿ ನಿರ್ಮಾಣವಾಗಿರುವ ತೀವ್ರ ಬರಗಾಲದ ಹಿನ್ನೆಲೆಯಲ್ಲಿ ರೈತರ ನೆರವಿಗೆ ಸರ್ಕಾರ ತಕ್ಷಣ ಧಾವಿಸಬೇಕು. ರೈತರ ಸಾಲ ಮನ್ನಾ ಮಾಡುವುದರ ಜೊತೆಗೆ ಹಿಂಗಾರು ಬಿತ್ತನೆಗೆ ಉಚಿತವಾಗಿ ಬೀಜ ಮತ್ತು ರಸಗೊಬ್ಬರ ವಿತರಿಸಬೇಕು ಎಂದು ಜಿಪಂ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್ ಆಗ್ರಹಿಸಿದರು.

ಪಟ್ಟಣದ ಬಸವೇಶ್ವರ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಮೆರವಣಿಗೆಯ ನೇತೃತ್ವ ವಹಿಸಿ, ತಹಶೀಲ್ದಾರ್ ಸಂಜೀವಕುಮಾರ ದಾಸರ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಸೊನ್ನ ಬ್ಯಾರೇಜ್ ಮೂಲಕ ಅವೈಜ್ಞಾನಿಕವಾಗಿ ಆಳಂದ ತಾಲೂಕಿನ ಅಮರ್ಜಾ ಜಲಾಶಯ ಹಾಗೂ ಕೆರೆಗಳನ್ನು ತುಂಬಿಸಲಾಗುತ್ತಿದೆ. ಅಫಜಲಪುರ ತಾಲೂಕಿನಲ್ಲಿಯೂ ತೀವ್ರ ಬರಗಾಲವಿದ್ದರೂ, ಸೊನ್ನ ಬ್ಯಾರೇಜ್‌ನಿಂದ ಆಳಂದ ತಾಲೂಕಿನ ಕೆರೆಗಳಿಗೆ ನೀರು ಹರಿಸುತ್ತಿರುವುದು ಅಫಜಲಪುರ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ ಮಾತನಾಡಿ, ಈ ಭಾಗದಲ್ಲಿ ಶೇ.65ರಷ್ಟು ಮಳೆ ಕೊರತೆ ಎದುರಾಗಿದ್ದು, ರೈತರು ಸಂಕಷ್ಟದಲ್ಲಿದ್ದಾರೆ. ಸೊನ್ನ ಬ್ಯಾರೇಜ್ ನೀರಾವರಿ ಯೋಜನೆಗೆ ಭಾರೀ ಅನುದಾನ ವೆಚ್ಚವಾಗಿದ್ದರೂ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ ಎಂದು



ಹೇಳಿದರು.

ಅಫಜಲಪುರ ತಾಲೂಕಿನ ರೈತರಿಗೆ ನೀರಿನ ಕೊರತೆ ಇರುವಾಗ ಪಕ್ಕದ ಆಳಂದ ತಾಲೂಕಿಗೆ ನೀರು ಹರಿಸುವುದು ಸರಿಯಲ್ಲ. ರೈತರ ಸಾಲ ಮನ್ನಾ ಹಾಗೂ ಬರ ಪರಿಹಾರಕ್ಕಾಗಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ತಾಲೂಕಿನ ಹಿತಾಸಕ್ತಿಗೆ ಧಕ್ಕೆಯಾಗುವ ರೀತಿಯಲ್ಲಿ ನೀರು ಹರಿಸಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು.

ಬಿಜೆಪಿ ಮುಖಂಡ ವಿಶ್ವನಾಥ ರೇವೂರ ಮಾತನಾಡಿ, ಮಾಶಾಳ-3 ಹಾಗೂ ಕರಜಗಿ-1 ಕೆರೆ ತುಂಬುವ ಯೋಜನೆಗಳು ಪೂರ್ಣಗೊಂಡು ವರ್ಷಗಳಾದರೂ ಕೆರೆಗಳನ್ನು ಸಮರ್ಪಕವಾಗಿ ತುಂಬಿಸಲು ಸಾಧ್ಯವಾಗಿಲ್ಲ. ಚುನಾವಣೆ ಸಮೀಪಿಸಿದಾಗ ಮಾತ್ರ ಅಭಿವೃದ್ಧಿ ಹೆಸರಿನಲ್ಲಿ ಕಾಟಾಚಾರ ನಡೆಯುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ವಿದ್ಯಾಧರ ಮಂಗಳೂರೆ ಸೇರಿದಂತೆ ಪಕ್ಷದ ಮುಖಂಡರು ಹಾಗೂ ರೈತರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಅಶೋಕ ಬಗಲಿ, ರಮೇಶ ಬಾಕೆ, ಬಸವರಾಜ ವಾಳಿ, ಸುನೀಲ್ ಶೆಟ್ಟಿ, ಚಂದಮ್ಮ ಪಾಟೀಲ, ಶರಣು ಪದಕಿ, ಧಾನು ಪತಾಟೆ, ಶೈಲೇಶ ಗುಣಾರಿ, ಶಿವಶರಣಪ್ಪ ಪಡಶೆಟ್ಟಿ, ಸುಭಾಷಚಂದ್ರ ರಾಠೋಡ, ಶರಣು ದಿವಾಣಜಿ, ಶಮಶೋದ್ದಿನ್ ಅಖ್ತರ, ಬಸವರಾಜ ಮಾಲಗತ್ತಿ, ಸುರೇಖಾ ಪದಕಿ, ವಿಜಯಕುಮಾರ ದೇಸಾಯಿ, ಬಸವರಾಜ ಸಪ್ಪನಗೋಳ, ನೂರ ಅಹ್ಮದ್ ಬಾಗವಾನ, ಪುಟ್ಟು ಹೂಗಾರ, ತನ್ವೀರ್ ಮಣ್ಣೂರ, ಸಿದ್ದು ರಾಣೆ, ಅನೀಲ್ ಸೊನ್ನ, ರಾಚಯ್ಯ ಮಠ, ಅನೀಲ ನಾವಿ ಹಾಗೂ ಸಚಿನ್ ಮ್ಯಾಕೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಆರೋಗ್ಯಾಧಿಕಾರಿಗಳ ಅಮಾನತು ಆದೇಶ ಹಿಂಪಡೆಯಲು ಸರ್ಕಾರಿ ನೌಕರರ ಸಂಘ ಆಗ್ರಹ

ಬಸವಕಲ್ಯಾಣ,ಸೆ.22-

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜ್ಞಾನೇಶ್ವರ್ ನಿರಗುಡೆ ಹಾಗೂ ತಾಲೂಕು ಆರೋಗ್ಯಾಧಿಕಾರಿ ಡಾ. ಅಶೋಕ್ ಮೈಲಾರೆ ಅವರನ್ನು ಅಮಾನತುಗೊಳಿಸಿದ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿ ಬಸವಕಲ್ಯಾಣ ಹಾಗೂ ಹುಲಸೂರ್ ತಾಲೂಕಿನ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮನವಿ ಸಲ್ಲಿಸಿದೆ.

ಸಹಾಯಕ ಆಯುಕ್ತರ ಮೂಲಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಜ್ಯ ಆಯುಕ್ತರಿಗೆ ಸಲ್ಲಿಸಿದ ಮನವಿಯಲ್ಲಿ, ಉಪವಿಭಾಗೀಯ ಆಸ್ಪತ್ರೆ ಕಟ್ಟಡ ಕಾಮಗಾರಿ ಶಂಕುಸ್ಥಾಪನೆ ಕಾರ್ಯಕ್ರಮದ ವೇಳೆ ಬ್ಯಾನರ್‌ಗೆ ಸಂಬಂಧಿಸಿದ ವಿಷಯದ ಹಿನ್ನೆಲೆಯಲ್ಲಿ ಇಬ್ಬರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ಉಲ್ಲೇಖಿಸಲಾಗಿದೆ.

ಡಾ. ಜ್ಞಾನೇಶ್ವರ್ ನಿರಗುಡೆ ಹಾಗೂ ಡಾ. ಅಶೋಕ್ ಮೈಲಾರೆ ಅವರು ಪ್ರಾಮಾಣಿಕ, ದಕ್ಷ ಮತ್ತು ಕರ್ತವ್ಯನಿಷ್ಠ ಅಧಿಕಾರಿಗಳಾಗಿದ್ದು, ಜಿಲ್ಲೆ ಹಾಗೂ ತಾಲೂಕಿನ ಆರೋಗ್ಯ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆ. ಅವರ ಜನಪರ ಕಾರ್ಯವೈಖರಿ ಮತ್ತು ಇಲಾಖೆಗೆ ಸಲ್ಲಿಸುತ್ತಿರುವ ಸೇವೆಯನ್ನು ಅಧಿಕಾರಿಗಳು ಹಾಗೂ ನೌಕರರು ಗೌರವಿಸುತ್ತಾರೆ ಎಂದು ಸಂಘ ತಿಳಿಸಿದೆ.

ಗಣ್ಯರ ಭಾವಚಿತ್ರ ಅಳವಡಿಕೆಗೆ ಸಂಬಂಧಿಸಿದ ಲೋಪವನ್ನೇ



ಆಧಾರವಾಗಿಟ್ಟುಕೊಂಡು ಅಮಾನತ್ತಿನಂತಹ ಕಠಿಣ ಕ್ರಮ ಕೈಗೊಂಡಿರುವುದು ಜಿಲ್ಲೆಯ ಅಧಿಕಾರಿಗಳು ಮತ್ತು ನೌಕರರಲ್ಲಿ ಆತಂಕ ಹಾಗೂ ಅಸಮಾಧಾನ ಮೂಡಿಸಿದೆ ಎಂದು ಮನವಿಯಲ್ಲಿ ಹೇಳಲಾಗಿದೆ.

ಪ್ರಕರಣದ ಕುರಿತು ರಾಜ್ಯ ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಿ, ವಾಸ್ತವಾಂಶಗಳನ್ನು ಪರಿಶೀಲಿಸಿ ಅಮಾನತು ಆದೇಶವನ್ನು ಹಿಂಪಡೆದು ಇಬ್ಬರು ಅಧಿಕಾರಿಗಳನ್ನು ಕರ್ತವ್ಯಕ್ಕೆ ಮರು ನಿಯೋಜಿಸಬೇಕು. ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳಿಗೆ ಅನಗತ್ಯ ಒತ್ತಡ ಹಾಗೂ ಅನ್ಯಾಯವಾಗದಂತೆ ರಕ್ಷಣೆ ನೀಡಬೇಕು ಎಂದು ಸಂಘ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹುಲಸೂರ್ ತಾಲೂಕಾಧ್ಯಕ್ಷ ನಾಗರಾಜ್ ಹಾವಣ್ಣಾ, ಪ್ರಧಾನ ಕಾರ್ಯದರ್ಶಿ ಶಿವರಾಜ್ ಮಾಶೆಟ್ಟಿ, ಖಜಾಂಚಿ ರಾಜಕುಮಾರ್ ಶೆಟ್ಟೆಪ್ಪಾ, ರಾಜ್ಯ ಪರಿಷತ್ ಸದಸ್ಯ ಭೀಮಾಶಂಕರ್ ಆದೆಪ್ಪಾ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬಸವಕಲ್ಯಾಣ ತಾಲೂಕು ಪ್ರಧಾನ ಕಾರ್ಯದರ್ಶಿ ಅಂಬಣ್ಣಾ ಘಾಂಗ್ರೆ, ಖಜಾಂಚಿ ಸುಭಾಷ್ ಕಾಮಶೆಟ್ಟಿ, ಶಿವಕುಮಾರ್ ಜಡಗೆ, ಪ್ರಕಾಶ್ ವಾಡೆಕರ ಹರ್ಷವರ್ಧನ್,

ಹಿರಿಯ ವೈದ್ಯಾಧಿಕಾರಿ ಡಾ.ಪ್ರತಾಪ್ ಬಿರಾದರ್ ಡಾ.ಅಭಿಲಾಶ್ ಕನಕ, ಡಾ.ಆನಂದ್ ದಂಡೆ, ಬಾ.ಶಶಿಕಾಂತ್ ಕನ್ನಾಡೆ ಡಾ.ರವಿಶಂಕರ್ ಖಿಂಡ್ರೆ, ಡಾ.ಅಕ್ಕಮಹಾದೇವಿ ಗಡ್ಡೆ, ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಅಶ್ವಿನಿ ಫಾಳೆ ಹಾಗೂ ಆರೋಗ್ಯ ಇಲಾಖೆಯ ಎಲ್ಲಾ ಹಂತದ ಸಿಬ್ಬಂದಿ ವರ್ಗದವರು ಹಾಗೂ ಸರ್ಕಾರಿ ನೌಕರರು ಹಾಜರಿದ್ದರು.

ಗಣೇಶ ಉತ್ಸವ ನಿಮಿತ್ತ ರಕ್ತದಾನ ಶಿಬಿರ : 40 ಯುವಕರಿಂದ ರಕ್ತದಾನ

ಸೇಡಂ,ಸೆ.22-

ತಾಲೂಕಿನ ಇಟ್ಕಲ್ ಗ್ರಾಮದ ರಾಷ್ಟ್ರೀಯ ಗ್ರಾಮೀಣ ಯುವಕ ಮಂಡಳಿಯ ವತಿಯಿಂದ ಗೌರಿ-ಗಣೇಶ ಉತ್ಸವದ ಅಂಗವಾಗಿ ಆಯೋಜಿಸಿದ್ದ ರಕ್ತದಾನ ಶಿಬಿರ ಯಶಸ್ವಿಯಾಗಿ ನಡೆಯಿತು. ಶಿಬಿರದಲ್ಲಿ ಒಟ್ಟು 40 ಮಂದಿ ಯುವಕರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಕಲಬುರಗಿಯ ಜಿಮ್ಸ್ ಆಸ್ಪತ್ರೆಯ ರಕ್ತ ನಿಧಿ ಕೇಂದ್ರ ಹಾಗೂ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಶಿಬಿರವನ್ನು ಆಯೋಜಿಸಲಾಗಿತ್ತು.



ಈ ಸಂದರ್ಭದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ಸಂಜೀವ್ ಪಾಟೀಲ್ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಹಬ್ಬ-ಹರಿದಿನಗಳ ಸಂದರ್ಭದಲ್ಲಿ ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಅಪಘಾತ, ತುರ್ತು ಚಿಕಿತ್ಸೆ ಹಾಗೂ ಹೆರಿಗೆಯಂತಹ ಸಂದರ್ಭಗಳಲ್ಲಿ ರಕ್ತದ ಅಗತ್ಯತೆ ಹೆಚ್ಚಿರುತ್ತದೆ. ಯುವಜನತೆ ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಉಳಿಸಲು ಮುಂದಾಗಬೇಕು ಎಂದು ಕರೆ ನೀಡಿದರು.

ಇಟ್ಕಲ್ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ದೇವಿಕಾ ಮಾತನಾಡಿ, ರಕ್ತದಾನ ಮಾಡುವುದರಿಂದ ದಾನಿಗಳ ಆರೋಗ್ಯಕ್ಕೂ ಉತ್ತಮ ಪ್ರಯೋಜನಗಳಿವೆ. ಯಾವುದೇ ಭಯವಿಲ್ಲದೆ ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯೂ ರಕ್ತದಾನ ಮಾಡಬಹುದು ಎಂದು ತಿಳಿಸಿದರು.

ಶಿಬಿರದಲ್ಲಿ ಜಿಮ್ಸ್ ರಕ್ತ ನಿಧಿ ಕೇಂದ್ರದ ವೈದ್ಯಕೀಯ ಸಿಬ್ಬಂದಿ, ರಾಷ್ಟ್ರೀಯ ಗ್ರಾಮೀಣ ಯುವಕ ಮಂಡಳಿಯ ಪದಾಧಿಕಾರಿಗಳು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು. ರಕ್ತದಾನ ಮಾಡಿದ ಎಲ್ಲ ಯುವಕರಿಗೆ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಕಿರಣ ದೇಶಮುಖರಿಗೆ ಅಭಿನಂದನಾ ಸನ್ಮಾನ

ಕಲಬುರಗಿ,ಸೆ.22-

ಜಿಲ್ಲಾ ಕಾಂಗ್ರೆಸ್ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಡಾ. ಕಿರಣ ದೇಶಮುಖ ಅವರನ್ನು ರಾಜ್ಯ ಅಲ್ಪಸಂಖ್ಯಾತ ಸಮುದಾಯದ ಉಪಾಧ್ಯಕ್ಷ ಲಾಲ್ ಅಹಮದ್ ಬಾಂಬೆ ಸೇಠ್ ಅವರ ನೇತೃತ್ವದಲ್ಲಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಲಾಲ್ ಅಹಮದ್ ಬಾಂಬೆ ಸೇಠ್, ಡಾ. ಕಿರಣ ದೇಶಮುಖ ಅವರ ನೇತೃತ್ವದಲ್ಲಿ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಪಕ್ಷ ಮತ್ತಷ್ಟು ಸಂಘಟಿತವಾಗಿ ಬಲಿಷ್ಠವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಪಕ್ಷದ ತತ್ವ, ಸಿದ್ಧಾಂತ ಹಾಗೂ ಜಾತ್ಯತೀತ ಆಶಯಗಳನ್ನು ಜನರಿಗೆ ತಲುಪಿಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಕಿರಣ ದೇಶಮುಖ, ತಮ್ಮ ಮೇಲೆ ವಿಶ್ವಾಸವಿಟ್ಟು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಜವಾಬ್ದಾರಿ ನೀಡಿರುವ ಪಕ್ಷದ ಹಿರಿಯ ನಾಯಕರು, ಮುಖಂಡರು ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸಿದರು.

ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಆದ್ಯತೆ ನೀಡಿ, ಎಲ್ಲ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ಮತ್ತಷ್ಟು ಬಲಪಡಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಅವರು ತಿಳಿಸಿದರು. ಸನ್ಮಾನ ಕಾರ್ಯಕ್ರಮದಲ್ಲಿ ಮಜಲ್ ಅಲಂ ಖಾನ್, ವಹಾಜ್ ಬಾಬಾ, ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಕಸ್ತೂರಿ ರಂಗನ್ ವರದಿ ವಿರುದ್ಧ ಸರ್ವಾನುಮತದ ನಿರ್ಣಯ ಅಂಗೀಕಾರ

ನಂತರವೇ ಈ ವಿಷಯದಲ್ಲಿ ಅಂತಿಮ ನಿರ್ಧಾರವನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ. ರಾಜ್ಯ ಮಟ್ಟದ ಸಮಿತಿಗೆ ಸಹಾಯ ಮಾಡಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಜನಪ್ರತಿನಿಧಿಗಳನ್ನೊಳಗೊಂಡ ಸಮಿತಿಗಳನ್ನು ರಚಿಸಲು ನಿರ್ಧರಿಸಲಾಗಿದೆ.

ನ್ಯೂನತೆ ಸರಿಪಡಿಸಲು ಆಗ್ರಹ: ಎಲ್ಲ ಪಕ್ಷದ ಶಾಸಕರ ಅಭಿಪ್ರಾಯಗಳನ್ನು ಕ್ರೂಢೀಕರಿಸಿ, ಕರ್ನಾಟಕ ವಿಧಾನ ಸಭೆಯು ಸರ್ವಾನುಮತದಿಂದ 27ನೇ ಜುಲೈ 2026ರಂದು ಭಾರತ ಸರ್ಕಾರ ಹೊರಡಿಸಿದ 7ನೇ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪುವುದಿಲ್ಲ ಹಾಗೂ ನ್ಯೂನತೆಗಳನ್ನು ಸರಿಪಡಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

ಅರಣ್ಯ ಪ್ರದೇಶದ ಜೊತೆ ಕೃಷಿ ಜಮೀನು, ತೋಟಗಳು, ಮನೆಗಳು ಮತ್ತು ಸಾರ್ವಜನಿಕ ಸೌಲಭ್ಯಗಳನ್ನು ಅಡಿ ಸೇರಿಸಲಾಗಿರುವುದರಿಂದ, ಮನೆ ನಿರ್ಮಾಣ, ಕುಟುಂಬದ ಆಸ್ತಿ ವಿಭಜನೆ ಮತ್ತು ವಾರಸುದಾರಿಕೆಗೆ ಸಂಬಂಧಪಟ್ಟಂತೆ ಸಮಸ್ಯೆಗಳು ಉದ್ಭವವಾಗುತ್ತವೆ. ಕರಡು ಅಧಿಸೂಚನೆಯು ಉಪಗ್ರಹ ದತ್ತಾಂಶವನ್ನು ( ) ಆಧಾರಿತವಾಗಿದ್ದು, ನಿಖರ ಗಡಿ, ಸರ್ವೇ ನಂಬರ್ ಆಧಾರಿತವಾಗಿರುವುದಿಲ್ಲ. ಜನರಿಗೆ ಪರ್ಯಾಯ ಜೀವನೋಪಾಯಕ್ಕೆ ವಿಶೇಷ ಆರ್ಥಿಕ ನೆರವು ನೀಡಲು ಯಾವುದೇ ಪ್ರಸ್ತಾಪ ಇರುವುದಿಲ್ಲ. ಬಗರ್ ಹುಕುಂ, ಅರಣ್ಯ ಹಕ್ಕು, ಡೀಮ್ಸ್ ಫಾರೆಸ್ಟ್, ಭೂ ಮಂಜೂರಾತಿ, ಮೇಲ್ಮನವಿ ಮತ್ತು ನ್ಯಾಯಾಂಗ ಪ್ರಕರಣಗಳಂತಹ ವಿಷಯಗಳನ್ನು ಪರಿಗಣಿಸಿರುವುದಿಲ್ಲ. ಒಂದು ಗ್ರಾಮದ ಐದನೇ ಒಂದು ಭಾಗ (1/5) ಅರಣ್ಯ ವ್ಯಾಪ್ತಿಯಲ್ಲಿ ಬರುತ್ತದೆ ಎಂಬ ಆಧಾರದ ಮೇಲೆ ಇಡೀ ಗ್ರಾಮವನ್ನು ಪರಿಸರ ಸೂಕ್ಷ್ಮ ಪ್ರದೇಶ () ಎಂದು ಘೋಷಿಸುವುದು ವೈಜ್ಞಾನಿಕ ಕ್ರಮವಲ್ಲ ಎಂದು ತಿಳಿಸಿದೆ.

ಆಯುಷ್ ವೈದ್ಯರ ಮೇಲಿನ ದೌರ್ಜನ್ಯ ತಡೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ

ಕ್ರಮ ಯಾಕೆ ಎನ್ನುವ ಪ್ರಶ್ನೆ ಎದ್ದಿದೆ ಎಂದು ಹೇಳಿದರು.

ದೇವದುರ್ಗ ಮತ್ತು ಮಾನ್ವಿ ತಾಲೂಕು ವೈದ್ಯಾಧಿಕಾರಿಗಳು ಸರ್ವಾಧಿಕಾರಿಗಳಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ಅವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ತಾಲೂಕು ಮಟ್ಟದಲ್ಲಿ ಹೋರಾಟ ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ನಂದಿತಾ ಮಾತನಾಡಿ, ಆಯುಷ್ ಫೆಡರೇಶನ್ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಕುರಿತು ಸೋಮವಾರ ಮಾಹಿತಿ ನೀಡಲಾಗಿದ್ದು, ಪರಿಶೀಲನೆಗೆ ಸ್ವಲ್ಪ ಸಮಯಾವಕಾಶ ಕೋರಿದ್ದೇವೆ ಎಂದು ತಿಳಿಸಿದರು.

ಆಯುಷ್ ವೈದ್ಯರನ್ನು ಗುರಿಯಾಗಿಸಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂಬ ಆರೋಪದ ಕುರಿತು ಪರಿಶೀಲನೆ ನಡೆಸಲಾಗುವುದು. ತಾಲೂಕು ವೈದ್ಯಾಧಿಕಾರಿಗಳ ವಿರುದ್ಧ ಬಂದಿರುವ ದೂರುಗಳ ವಿಚಾರಣೆಯೂ ನಡೆಯಲಿದೆ. ಏಕಪಕ್ಷೀಯವಾಗಿ ಯಾವುದೇ ನಿರ್ಧಾರ ಕೈಗೊಳ್ಳುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಪ್ರತಿಭಟನೆಯಲ್ಲಿ ಡಾ. ಶ್ರೀಕಾಂತ ಕೊಂಕಣಿ, ಡಾ. ಅಮೀತ್ ಎಂ.ಎಸ್., ಡಾ. ಆನಂದ ಕುಲಕರ್ಣಿ, ಡಾ. ಮಹಾವೀರ್ ಹಾವೇರಿ, ಡಾ. ಸಂದೀಪ್ ಕುಲಕರ್ಣಿ, ಡಾ. ರವೀಂದ್ರ, ಡಾ. ಎ.ಡಿ. ಹನೀಫ್, ಡಾ. ಸುನೀಲ್ ರಾಯ್, ಡಾ. ರಾಜೇಂದ್ರ, ಡಾ. ಶಶಿಕಾಂತ್ ಹೆಚ್.ಸಿ., ಡಾ. ಸುನಿಲ್ ಆರ್. ಹಿರೇಮಠ, ಡಾ. ಸಂತೋಷ ಎಂ.ಬಿ., ಡಾ. ಶ್ರೀನಿವಾಸ ಕೆ. ಬನ್ನಿಗೋಳ, ಡಾ. ಸೋಮಶೇಖರ್ ಹುಡೆದ್, ಡಾ. ಜಿ.ಬಿ. ಕುಂಬಾರ, ಡಾ. ಪ್ರಕಾಶ ಪಾಟೀಲ್ ಸೇರಿದಂತೆ ನೂರಾರು ಆಯುಷ್ ವೈದ್ಯರು ಭಾಗವಹಿಸಿದ್ದರು.

ಭೂರಹಿತರಿಗೆ ಭೂಮಿ ಮಂಜೂರು ಮಾಡಲು ಆಗ್ರಹಿಸಿ ಉಪವಾಸ ಸತ್ಯಾಗ್ರಹ

ನಡೆಸಿ ಹದ್ದುಬಸ್ತು ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ಅನೇಕ ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರ ಮೇಲೆ ಅಧಿಕಾರಿಗಳು ದೌರ್ಜನ್ಯ ಎಸಗುತ್ತಿದ್ದಾರೆ. ಈ ಕುರಿತು ಪೊಲೀಸರ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರಧಾನಮಂತ್ರಿ ಉದ್ಯೋಗ ಸೃಜನ ಕಾರ್ಯಕ್ರಮ () ಯೋಜನೆಯಡಿ ಅರ್ಜಿ ಸಲ್ಲಿಸಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲ ನೀಡಲು ನಿರಾಕರಿಸುತ್ತಿರುವ ಬ್ಯಾಂಕ್‌ಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಧರಣಿಯಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ಮಾರೆಪ್ಪ ಹರವಿ, ಆಂಜನೇಯ ಕುರುಬದೊಡ್ಡಿ, ಬಂಗಾರಿ ನರಸಿಂಹಲು, ಗಂಗಪ್ಪ ತೋರಣದಿನ್ನಿ, ರಾಮಣ್ಣ ಮಸ್ಕಿ, ಬಸವರಾಜ ತೋರಣದಿನ್ನಿ ಹಾಗೂ ತಿಮ್ಮಮ್ಮ ಹಿರೇದಿನ್ನಿ ಭಾಗವಹಿಸಿದ್ದರು.

ಗಣೇಶ ವಿಸರ್ಜನೆ ವೇಳೆ ದುರಂತ: ಮೃತ ಮಕ್ಕಳ ಕುಟುಂಬಗಳಿಗೆ ಪರಿಹಾರಕ್ಕೆ ಆಗ್ರಹ

ಪರಿಶೀಲನೆ ನಡೆಸಿ, ಏಳು ದಿನಗಳೊಳಗೆ ಪರಿಹಾರ ಮತ್ತು ಪುನರ್ವಸತಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪ್ರವೀಣ್ ಕುಮಾರ್, ಜಯರಾಜ್, ರಮೇಶ್ ಯಾರಾಮರಸ್, ಉಮೇಶ್ ಹಾಗೂ ನಾಗರಾಜ್ ಮನವಿ ಸಲ್ಲಿಸಿದ್ದಾರೆ.

ಸರ್ವರ್ ಸಮಸ್ಯೆ: ಇ-ಕೆವೈಸಿಗೆ 2-3 ತಿಂಗಳ ಕಾಲಾವಕಾಶ ನೀಡಿ

ಹಾಗೂ ಫಲಾನುಭವಿಗಳ ನಡುವೆ ಅನಗತ್ಯ ವಾಗ್ವಾದಕ್ಕೂ ಕಾರಣವಾಗುತ್ತಿದೆ ಎಂದು ಸಂಘಟನೆ ತಿಳಿಸಿದೆ.

ಸರ್ವರ್ ಸಮಸ್ಯೆಯಿಂದ ಪಡಿತರ ವಿತರಕರ ಮೇಲೂ ಮಾನಸಿಕ ಒತ್ತಡ ಉಂಟಾಗುತ್ತಿದ್ದು, ರಾಯಚೂರು ನಗರ ಹಾಗೂ ಗ್ರಾಮೀಣ ಪ್ರದೇಶದ ಪಡಿತರ ಚೀಟಿದಾರರು ತೊಂದರೆ ಅನುಭವಿಸುತ್ತಿದ್ದಾರೆ. ಸಮಸ್ಯೆ ಪರಿಹಾರವಾಗುವವರೆಗೆ ಇ-ಕೆವೈಸಿಗೆ ಹೆಚ್ಚುವರಿ ಕಾಲಾವಕಾಶ ನೀಡುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಜೆಗ್ಗಿ ಉರುಕುಂದಪ್ಪ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ರೈತ ಮುಖಂಡರೊಂದಿಗೆ ಡಿಸಿ-ಎಸ್‌ಪಿ ಸಭೆ



ಯಾದಗಿರಿ,ಸೆ.22-

ರೈತರ ವಿವಿಧ ಬೇಡಿಕೆಗಳ ಕುರಿತು ಚರ್ಚಿಸಲು ಸೋಮವಾರ ರಾತ್ರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಕಚೇರಿಯಲ್ಲಿ ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ ಹಾಗೂ ಎಸ್‌ಪಿ ಪೃಥ್ವಿಕ್ ಶಂಕರ್ ಅವರು ರೈತ ಮುಖಂಡರೊಂದಿಗೆ ಸುಮಾರು 40 ನಿಮಿಷಗಳ ಕಾಲ ಸಭೆ ನಡೆಸಿದರು.

ಸಭೆಯ ಆರಂಭದಲ್ಲಿ ರೈತ ಮುಖಂಡರಾದ ಮಹೇಶಗೌಡ ಸುಬೇದಾರ, ಮಲ್ಲಣ್ಣ ಪರಿವಾಣ, ಶರಣಬಸವ ಸ್ವಾಮಿ ಬದ್ದೆಪಲ್ಲಿ ಹಾಗೂ ವಿಜಯಕುಮಾರ ಅವರು ರೈತರ ಬೇಡಿಕೆಗಳನ್ನು ಜಿಲ್ಲಾಡಳಿತದ ಗಮನಕ್ಕೆ ತಂದರು.

ಕೆರೆಗಳಿಗೆ ನೀರು ತುಂಬಿಸುವ ವಿಚಾರದಲ್ಲಿ ಜಿಲ್ಲಾಧಿಕಾರಿ ಮತ್ತು ಎಸ್‌ಪಿ ಅವರು ಕೆಬಿಜೆಎನ್‌ಎಲ್ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ವಾಸ್ತವ ಸ್ಥಿತಿಯ ಮಾಹಿತಿ ಪಡೆದುಕೊಂಡರು. ಬಳಿಕ ಮಂಗಳವಾರ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜಿಲ್ಲಾಡಳಿತದಿಂದ ಸಾಧ್ಯವಾದ ಮಟ್ಟಿಗೆ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಮಲ್ಕಪ್ಪನಹಳ್ಳಿ ಮತ್ತು ಬದ್ದೆಪಲ್ಲಿ ಗ್ರಾಮಗಳಿಗೆ ಬೋರ್‌ವೆಲ್ ಒದಗಿಸುವುದು ಸೇರಿದಂತೆ ಇತರ ಸಮಸ್ಯೆಗಳ ಬಗ್ಗೆಯೂ ರೈತ ಮುಖಂಡರು ಅಧಿಕಾರಿಗಳ ಗಮನ ಸೆಳೆದರು.

ಧರಣಿ ಹಿಂಪಡೆಯುವಂತೆ ಅಧಿಕಾರಿಗಳು ಮನವಿ ಮಾಡಿದ ಹಿನ್ನೆಲೆಯಲ್ಲಿ, ಮಂಗಳವಾರ ನಡೆಯುವ ಸಭೆಯ ಫಲಿತಾಂಶದ ಬಳಿಕ ಪ್ರತಿಭಟನಾಕಾರರ ಸಮ್ಮುಖದಲ್ಲೇ ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ರೈತ ಮುಖಂಡ ಮಹೇಶಗೌಡ ಸುಬೇದಾರ ತಿಳಿಸಿದರು. ಬಳಿಕ ಸಭೆ ಮುಕ್ತಾಯಗೊಂಡಿತು.

ಶಿಕ್ಷಕರು ಸಮಾಜದ ಭವಿಷ್ಯ ರೂಪಿಸುವ ಶಕ್ತಿ : ಶಾಸಕ ಅಲ್ಲಮಪ್ರಭು ಪಾಟೀಲ



ಕಲಬುರಗಿ,ಸೆ.22-

ಶಿಕ್ಷಕರು ಸಮಾಜದ ಭವಿಷ್ಯವನ್ನು ರೂಪಿಸುವ ಪ್ರಮುಖ ಶಕ್ತಿಯಾಗಿದ್ದು, ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಮೌಲ್ಯಗಳು ಹಾಗೂ ಜವಾಬ್ದಾರಿಯುತ ನಾಗರಿಕತ್ವದ ಅರಿವು ಮೂಡಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಕಲಬುರಗಿ ದಕ್ಷಿಣ ಶಾಸಕ ಅಲ್ಲಮ ಪ್ರಭು ಪಾಟೀಲ ಹೇಳಿದರು.

ನಗರದ ಸೇಡಂ ರಸ್ತೆಯ ಎಂಆರ್‌ಎಂಸಿ ಸ್ಯಾಕ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಆಯೋಜಿಸಿದ್ದ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ, ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಹಾಗೂ ಪ್ರತಿಭಾವಂತ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಅಫಜಲಪುರ ಶಾಸಕ ಎಂ.ವೈ. ಪಾಟೀಲ ಮಾತನಾಡಿ, ದೇಶದ ಭಾವಿ ಪ್ರಜೆಗಳನ್ನು ರೂಪಿಸುವ ಮಹತ್ತರ ಹೊಣೆ ಶಿಕ್ಷಕರ ಮೇಲಿದೆ. ವಿದ್ಯಾರ್ಥಿಗಳು ಉತ್ತಮ ನಾಗರಿಕರಾಗಿ ಸಮಾಜದಲ್ಲಿ ಬದುಕಲು ಅಗತ್ಯವಾದ ಮಾರ್ಗದರ್ಶನ ಮತ್ತು ಮೌಲ್ಯಾಧಾರಿತ ಶಿಕ್ಷಣವನ್ನು ಶಿಕ್ಷಕರು ನೀಡುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮೂಲಿ ಕಟ್ಟಿಮನಿ ಹಿರೇಮಠ ಪಾಳಾದ ಪಟ್ಟಾಧ್ಯಕ್ಷರಾದ ಷ.ಬ್ರ. ಡಾ. ಗುರುಮೂರ್ತಿ ಶಿವಾಚಾರ್ಯರು ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಹಾಗೂ ಶಾಸಕ ಅಲ್ಲಮಪ್ರಭು ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಗೌರವಾಧ್ಯಕ್ಷ ಡಾ. ಕೆ. ಹಣಮಂತಪ್ಪ, ರಾಜ್ಯಾಧ್ಯಕ್ಷ ಶಿವಾನಂದ ಹಿರೇಕುರುಬರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ಬಳೂಂಡಗಿ ಹಾಗೂ ಅಫಜಲಪುರ ಶಾಸಕ ಎಂ.ವೈ. ಪಾಟೀಲ ಪಾಲ್ಗೊಂಡಿದ್ದರು.

ಸಂಘದ ಜಂಟಿ ಕಾರ್ಯದರ್ಶಿ ಕಲ್ಯಾಣರಾವ ಬಿರಾದಾರ, ಸಂಘಟನಾ ಕಾರ್ಯದರ್ಶಿ ಪ್ರೇಮಸಿಂಗ್ ಚವ್ಹಾಣ, ಜಿಲ್ಲಾ ಗೌರವಾಧ್ಯಕ್ಷ ಹಣಮಂತ ಮರಡಿ, ಕಾರ್ಯಾಧ್ಯಕ್ಷ ಡಾ. ನಾಗಭೂಷಣ ವಿ. ಮಹಾಂತಿನಮಠ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ವಿಜಯಕುಮಾರ ಒಪ್ಪಾರಿ ಉಪಸ್ಥಿತರಿದ್ದರು. ಸಂಘದ ಜಿಲ್ಲಾ ಅಧ್ಯಕ್ಷ ಭಾನುಕುಮಾರ ಗಿರೇಗೋಳ ಅಧ್ಯಕ್ಷತೆ ವಹಿಸಿದ್ದರು.

ಕರ್ನಾಟಕ ರಾಜ್ಯ ರಾಜೀವಗಾಂಧಿ ಶ್ರೇಷ್ಠ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ಇಸಾಮುದ್ದೀನ್ ಖಾಜಿ ಹಾಗೂ ಮುತ್ತಣ್ಣ ಕುಂಬಾರ, ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ವಿಶ್ವನಾಥ ಪೊದ್ದಾರ, ರಾಷ್ಟ್ರೀಯ ಸಲಹೆಗಾರ ಡಾ. ಪ್ರೇಮಸಿಂಗ್ ಚವ್ಹಾಣ ಹಾಗೂ ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯಿಂದ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಸಿದ್ದಣ್ಣ ಹೂಗಾರ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರನ್ನು ಗೌರವಿಸಲಾಯಿತು. ಎಸೆಸೆಲ್ಸಿ ಮತ್ತು ಪಿಯುಸಿಯಲ್ಲಿ ಹೆಚ್ಚಿನ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಲಾಯಿತು. ರೇವಣ ಸಿ ದ್ದಯ್ಯ ವೈದ್ಯ ಸ್ವಾಗತಿಸಿದರು.

ತ್ಯಾಗ ಮತ್ತು ಸಂಘರ್ಷದ ಫಲವಾಗಿ ಈ ಪ್ರದೇಶವು ಸ್ವಾತಂತ್ರ್ಯದ ಹೊಸ ಅಧ್ಯಾಯವನ್ನು ಕಂಡಿತು ಎಂದು ಸ್ಮರಿಸಿದರು

ಬೀದರ್,ಸೆ.22-

ಬೀದರ್ ಜಿಲ್ಲೆಯಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಹಾಗೂ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 78ನೇ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಮಹಾವಿದ್ಯಾಲಯದ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳನ್ನೊಳಗೊಂಡು ಯಶಸ್ವಿಯಾಗಿ ಆಚರಿಸಲಾಯಿತು ಎಂದು ಬೀದರ್ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್. ವಿ. ಪಾಟೀಲ ಹೇಳಿದರು. ಬೀದರ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಇತ್ತೀಚೆಗೆ ನಡೆದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ನಿಮಿತ್ತ, ಸ್ವಾತಂತ್ರ್ಯದ ನಂತರ ಕೇಂದ್ರ ಸರ್ಕಾರದ ಪ್ರಪ್ರಥಮ ಗೃಹ ಸಚಿವರಾದ 'ಉಕ್ಕಿನ ಮನುಷ್ಯ' ಎಂದೇ ಖ್ಯಾತರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ರವರ ಭಾವಚಿತ್ರಕ್ಕೆ ಪೂಜೆ ಹಾಗೂ ಪುಷ್ಪ ನಮನವನ್ನು ಅರ್ಪಿಸಿ ಗೌರವಿಸಿದರು. ತಮ್ಮ ಅಮೃತ ಹಸ್ತದಿಂದ ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶದ ನಾಯಕರ ಹಾಗೂ ಜನರ ದೀರ್ಘಕಾಲದ ಹೋರಾಟ, ತ್ಯಾಗ ಮತ್ತು ಸಂಘರ್ಷದ ಫಲವಾಗಿ ಈ ಪ್ರದೇಶವು ಸ್ವಾತಂತ್ರ್ಯದ ಹೊಸ ಅಧ್ಯಾಯವನ್ನು ಕಂಡಿತು ಎಂದು ಸ್ಮರಿಸಿದರು. ಸೆಪ್ಟೆಂಬರ್ 17 ಈ ಭಾಗದ ಇತಿಹಾಸದಲ್ಲಿ ಮಹತ್ವದ ದಿನವಾಗಿದ್ದು, ಹೈದರಾಬಾದ್ ಕರ್ನಾಟಕ ಪ್ರದೇಶವು ನಿಜಾಮರ ಆಡಳಿತದಿಂದ ಮುಕ್ತಿಗೊಂಡ ಐತಿಹಾಸಿಕ ಸಂದರ್ಭವನ್ನು ಸ್ಮರಿಸುವ ದಿನವಾಗಿದೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಶಿಕ್ಷಣ, ಕೃಷಿ, ತೋಟಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಪ್ರಗತಿ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದ ಅವರು, ಯುವಜನತೆ ಈ ಪ್ರದೇಶದ ಇತಿಹಾಸ ಮತ್ತು ಪರಂಪರೆಯನ್ನು ಅರಿತುಕೊಂಡು, ಅಭಿವೃದ್ಧಿಯ ಪಥದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕರುಗಳಾದ ಡಾ.ಮುಹಮ್ಮದ್ ಫಾರೂಖ್, ಡಾ.ನಾಗೇಂದ್ರ ಕವಳೆ, ಡಾ.ಶ್ರೀನಿವಾಸ ಎನ್., ಡಾ.ರಾಜಕುಮಾರ ಎಮ್, ಡಾ.ಪ್ರವೀಣ ನಾಯಕೋಡಿ, ರಾಷ್ಟ್ರೀಯ ಸೇವಾ ಯೋಜನಾ ಘಟಕದ ಅಧಿಕಾರಿಯಾದ ಡಾ.ರಮೇಶ್ ನಾಯಕ, ಹಾಗೂ ಮಹಾವಿದ್ಯಾಲಯದ ಇನ್ನಿತರ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕು.ಮಧುಮತಿ ಒಡೆಯರ್ ಸಂಪೂರ್ಣ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.

ದಲಿತ ರೈತನ ಜಮೀನಿಗೆ ರಕ್ಷಣೆ ನೀಡಬೇಕು : ಅಂಬಾದಾಸ್ ಸೈನ್ಯ ಆಗ್ರಹ



ಬೀದರ್,ಸೆ.22-

ತಾಲೂಕಿನ ಅಮಲಾಪುರ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಸಮುದಾಯಕ್ಕೆ ಹಿಂದೆ ಸ್ಮಶಾನಕ್ಕಾಗಿ ಮೀಸಲಾಗಿದ್ದ ಜಮೀನು ಒತ್ತುವರಿಯಾಗಿದ್ದು, ಇದೀಗ ಸ್ಮಶಾನ ಭೂಮಿ ನೀಡುವ ಹೆಸರಿನಲ್ಲಿ ದಲಿತ ರೈತನ ಖಾಸಗಿ ಜಮೀನನ್ನು ಕಬಳಿಸಲು ಪ್ರಯತ್ನ ನಡೆಯುತ್ತಿದೆ. ಸರ್ಕಾರ ಕೂಡಲೇ ಆ ಜಮೀನಿಗೆ ರಕ್ಷಣೆ ನೀಡಬೇಕು ಎಂದು ರೈತ ಅಂಬಾದಾಸ್ ಸೈನ್ಯ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮದಲ್ಲಿ ಪರಿಶಿಷ್ಟ ಜಾತಿ ಸಮುದಾಯಕ್ಕೆ ಸುಮಾರು 2526 ವರ್ಷಗಳ ಹಿಂದೆ ಸರ್ವೆ ನಂ.72ರಲ್ಲಿ 1 ಎಕರೆ 39 ಗುಂಟೆ ಸ್ಮಶಾನ ಭೂಮಿ ಮಂಜೂರಾಗಿತ್ತು. ಆದರೆ, ಆ ಜಮೀನಿನಲ್ಲಿ ಪ್ರಭಾವಿಗಳು ಮನೆ ನಿರ್ಮಿಸಿಕೊಂಡು ಒತ್ತುವರಿ ಮಾಡಿದ್ದಾರೆ ಎಂದು ಆರೋಪಿಸಿದರು.

ಸ್ಮಶಾನ ಭೂಮಿ ಕೊರತೆಯನ್ನು ಉಲ್ಲೇಖಿಸಿ ಕಳೆದ ಒಂದು ವಾರದಿಂದ ಕೆಲವರು ತಹಶೀಲ್ದಾರ್ ಕಚೇರಿ ಎದುರು ಧರಣಿ ನಡೆಸುತ್ತಿದ್ದು, ಜನಸಂಖ್ಯೆಗೆ ಅನುಗುಣವಾಗಿ 5 ಎಕರೆ ಜಮೀನು ಮಂಜೂರು ಮಾಡುವಂತೆ ಆಗ್ರಹಿಸುತ್ತಿದ್ದಾರೆ. ಆದರೆ, ಸರ್ವೆ ನಂ.71ರಲ್ಲಿ ದಿವಂಗತ ತುಕ್ಕಪ್ಪ ಅವರಿಗೆ ಮಂಜೂರಾಗಿದ್ದ 4 ಎಕರೆ 38 ಗುಂಟೆ ಖಾಸಗಿ ಜಮೀನನ್ನೇ ಸ್ಮಶಾನಕ್ಕೆ ನೀಡಬೇಕು ಎಂದು ಒತ್ತಾಯಿಸಲಾಗುತ್ತಿದೆ ಎಂದು ದೂರಿದರು.

1993-94ರಲ್ಲಿ ಭೂರಹಿತ ಕುಟುಂಬಕ್ಕೆ ಲ್ಯಾಂಡ್ ಗ್ರಾಂಟ್ ಕಮಿಟಿಯ ಮೂಲಕ ಈ ಜಮೀನು ಮಂಜೂರಾಗಿದ್ದು, 2021-22ರಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ತುಕ್ಕಪ್ಪ ಅವರ ಸೊಸೆ ಲಕ್ಷ್ಮಿ ಅವರಿಗೆ ಮನೆ ಸಹ ಮಂಜೂರಾಗಿದೆ. ಮನೆ ನಿರ್ಮಾಣಕ್ಕೂ ಕೆಲವರು ಅಡ್ಡಿಪಡಿಸಿ ವಿವಾದ ಸೃಷ್ಟಿಸಿದ್ದಾರೆ ಎಂದು ಆರೋಪಿಸಿದರು.

ಹಿಂದೆ ಮಂಜೂರಾಗಿದ್ದ ಸ್ಮಶಾನ ಭೂಮಿಯನ್ನು ಪತ್ತೆಹಚ್ಚಿ ಸಮುದಾಯಕ್ಕೆ ಮುಕ್ತಗೊಳಿಸಬೇಕು. ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದರೆ ಖಾಸಗಿ ಜಮೀನು ಖರೀದಿಸಿ ಸ್ಮಶಾನ ಭೂಮಿ ಒದಗಿಸಬೇಕು. ಬಡ ದಲಿತ ಕುಟುಂಬದ ಪಟ್ಟಾ ಜಮೀನನ್ನು ಕಸಿದುಕೊಳ್ಳುವುದು ಅನ್ಯಾಯವಾಗಿದ್ದು, ಅಧಿಕಾರಿಗಳು ಸೂಕ್ತ ತನಿಖೆ ನಡೆಸಿ ತುಕ್ಕಪ್ಪ ಅವರ ಕುಟುಂಬದ ಜಮೀನಿಗೆ ರಕ್ಷಣೆ ಹಾಗೂ ಹಕ್ಕು ಬದಲಾವಣೆ ಮಾಡಿಕೊಡಬೇಕು ಎಂದು ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅಮಲಾಪುರ ಗ್ರಾಮದ ಮಚ್ಛೇಂದ್ರ, ಶಂಕರ್ ಜಗನ್ನಾಥ್, ರಾಹುಲ್, ರಾಜಶೇಖರ್ ಸುಭಾಷ್, ರಾಕೇಶ್ ಹಾಗೂ ರಾಮಚಂದ್ರ ಉಪಸ್ಥಿತರಿದ್ದರು.

ಯುವ ಜನತೆಗೆ ಪ್ರಜಾಪ್ರಭುತ್ವದ ವಿಚಾರಧಾರೆ ತಲುಪಿಸಿ: ಡಿಸಿ ಇಕ್ರಮ್ ಶರೀಫ್



ಕಲಬುರಗಿ, ಸೆ.22-

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಯುವಜನತೆಗೆ ಸಂಸದೀಯ ವ್ಯವಸ್ಥೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪರಿಚಯಿಸುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಯುವ ಸಂಸತ್ತು ಆಯೋಜಿಸಿ, ಇದೇ ವಾರದಲ್ಲಿ ತಾಲೂಕು ಮಟ್ಟದ ಸಭೆ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮ್ ಶರೀಫ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಯುವ ಸಂಸತ್ತು ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕರ್ನಾಟಕ ವಿಧಾನಸಭೆಯ ಮಾದರಿಯಲ್ಲಿ ಪ್ರೌಢಶಾಲೆ, ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಹಂತದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡು, ಸಾಧ್ಯವಾದರೆ 224 ವಿದ್ಯಾರ್ಥಿಗಳನ್ನೊಳಗೊಂಡ ಯುವ ಸಂಸತ್ತು ರಚಿಸಬೇಕು ಎಂದು ತಿಳಿಸಿದರು.

ತಾಲೂಕು ಮಟ್ಟದ ಯುವ ಸಂಸತ್ತಿನಲ್ಲಿ ಉತ್ತಮ ಕಾರ್ಯಕ್ಷಮತೆ ತೋರಿದ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಯುವ ಸಂಸತ್ತಿಗೆ ಶಿಫಾರಸು ಮಾಡಲಾಗುವುದು. ನಂತರ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದಿಂದ ಒಬ್ಬರನ್ನು ರಾಜ್ಯ ಮಟ್ಟದ ಯುವ ಸಂಸತ್ತಿಗೆ ಆಯ್ಕೆ ಮಾಡಿ ಕಳುಹಿಸಲಾಗುವುದು ಎಂದರು.

ಯುವ ಸಂಸತ್ತು ಸಭೆಯನ್ನು ಅರ್ಥಪೂರ್ಣವಾಗಿ ಆಯೋಜಿಸುವ ಜವಾಬ್ದಾರಿಯನ್ನು ಬಿಇಒಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ವಹಿಸಬೇಕು. ಜಿಲ್ಲಾ ಮಟ್ಟದ ಸಭೆಗೆ ಜಿಲ್ಲಾ ಉಸ್ತುವಾರಿ ಸಚಿವರು, ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ವಕೀಲರ ಸಂಘದ ಜಿಲ್ಲಾಧ್ಯಕ್ಷರನ್ನು ಆಹ್ವಾನಿಸಬೇಕು. ತಾಲೂಕು ಮಟ್ಟದ ಸಭೆಗೆ ಸ್ಥಳೀಯ ಶಾಸಕರು, ಸಂಸದರು ಹಾಗೂ ನ್ಯಾಯಾಧೀಶರನ್ನು ಆಹ್ವಾನಿಸುವಂತೆ ಸೂಚಿಸಿದರು.

ಸಭೆಯಲ್ಲಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಸಚಿವರು, ವಿಧಾನಸಭಾಧ್ಯಕ್ಷ, ಉಪಸಭಾಧ್ಯಕ್ಷ, ವಿರೋಧ ಪಕ್ಷದ ನಾಯಕ ಹಾಗೂ ಮುಖ್ಯ ಸಚೇತಕರ ಪಾತ್ರಗಳನ್ನು ವಿದ್ಯಾರ್ಥಿಗಳಿಗೆ ನೀಡುವ ಮೂಲಕ ಪ್ರಶ್ನೋತ್ತರ ಅವಧಿ, ಶೂನ್ಯ ವೇಳೆ, ಗಮನ ಸೆಳೆಯುವ ಸೂಚನೆ, ಗೊತ್ತುವಳಿ ಹಾಗೂ ವಿಧೇಯಕ ಮಂಡನೆ ಸೇರಿದಂತೆ ವಿಧಾನಸಭೆಯ ಕಾರ್ಯವಿಧಾನಗಳನ್ನು ಅನುಸರಿಸಿ ಯುವ ಸಂಸತ್ತು ನಡೆಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಮನಿ ಯುವ ಸಂಸತ್ತಿನ ರಚನೆ ಮತ್ತು ಕಾರ್ಯವಿಧಾನದ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಡಿಡಿಪಿಐ ಶಂಕ್ರೆಮ್ಮ ಡವಳಗಿ ಸೇರಿದಂತೆ ತಹಶೀಲ್ದಾರರು, ಬಿಇಒಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ವಿಡಿಯೊ ಕಾನ್ಫರೆನ್ಸ್ ಮೂಲಕ ಭಾಗವಹಿಸಿದ್ದರು.

ಅತ್ಯುತ್ತಮ ನಾಗರೀಕರನ್ನು ಸೃಷ್ಟಿಸುವ ಶಕ್ತಿ ಶಿಕ್ಷಕರಿಗಿದೆ : ಸಾಹೇಬ್



ವಾಡಿ, ಸೆ.22-

ದೇಶದ ಅತ್ಯುತ್ತಮ ನಾಗರಿಕರನ್ನು ರೂಪಿಸುವ ಶಕ್ತಿ ಶಿಕ್ಷಕರಿಗಷ್ಟೇ ಇದೆ ಎಂದು ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಸೈಯದ್ ಮೆಹಮೂದ್ ಚಿಸ್ತಿ ಸಾಹೇಬ್ ಹೇಳಿದರು.

ಪಟ್ಟಣದ ಸಿದ್ದಾರ್ಥ ಭವನದಲ್ಲಿ ಪಿಎಂಕೆ ಫ್ಯಾನ್ಸ್ ಕ್ಲಬ್ ವತಿಯಿಂದ ಸೋಮವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರಿಗೆ ವಿದ್ಯಾರ್ಥಿಗಳು ಸದಾ ಗೌರವ ನೀಡಬೇಕು. ಮಕ್ಕಳ ಮಾತುಗಳನ್ನು ಮಾತ್ರ ಕೇಳಿ ಶಿಕ್ಷಕರ ಮೇಲೆ ಹಲ್ಲೆ ಮಾಡುವ ಮಟ್ಟಕ್ಕೆ ಪೋಷಕರು ಇಳಿಯಬಾರದು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಥಳೀಯ ಬೌದ್ಧ ಸಮಾಜದ ಅಧ್ಯಕ್ಷ ಟೋಪಣ್ಣ ಕೋಮಟೆ ಮಾತನಾಡಿ, ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು ಎಂಬುದು ಸತ್ಯ. ಆದರೆ ನ್ಯಾಯ, ಸಮಾನತೆ, ಪರಸ್ಪರ ಪ್ರೀತಿ, ಮೈತ್ರಿ ಮತ್ತು ಸ್ವತಂತ್ರ ಬದುಕಿನ ಮೌಲ್ಯಗಳನ್ನು ಬೆಳೆಸುವಲ್ಲಿ ಶಾಲೆ ಮತ್ತು ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ತಾಯಿ ಮಗುವಿಗೆ ವಿದ್ಯಾವಂತನಾಗು ಎಂದು ಹೇಳಿದರೆ, ಶಿಕ್ಷಕರು ತಂದೆ-ತಾಯಿ, ಗುರು-ಹಿರಿಯರನ್ನು ಗೌರವಿಸುವ ಸಂಸ್ಕಾರವನ್ನು ಕಲಿಸುತ್ತಾರೆ. ಉತ್ತಮ ಪ್ರಜೆಯನ್ನು ರೂಪಿಸುವ ಶಕ್ತಿ ಶಿಕ್ಷಕರಿಗಿದ್ದು, ಅದಕ್ಕೆ ಪೂರಕ ವಾತಾವರಣವನ್ನು ಪೋಷಕರು ನಿರ್ಮಿಸುತ್ತಾರೆ ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ 27 ಮಂದಿ ಶಿಕ್ಷಕರಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪುರಸಭೆ ಮುಖ್ಯಾಧಿಕಾರಿ ಮನೋಜಕುಮಾರ ಗುರಿಕಾರ, ಮಹಾತ್ಮ ಗಾಂಧಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶೇಖ್ ಅನ್ವರ್ ಮುಖಂಡರಾದ ಬಾಬು ಮಿಯಾ, ಚಂದ್ರಸೇನ ಮೇನಗಾರ, ಮಾತನಾಡಿದರು.

ಪಿಎಸ್‌ಐ ತಿರುಮಲೇಶ ಕುಂಬಾರ, ಎಸಿಸಿ ಕಾರ್ಮಿಕ ಸಂಘದ ಅಧ್ಯಕ್ಷ, ಶರಣಬಸ್ಸು ಸಿರೂರಕರ, ಎಪಿಎಂಸಿ ಮಾಜಿ ಅಧ್ಯಕ್ಷ ಶಂಕ್ರಯ್ಯ ಸ್ವಾಮಿ ಮದ್ರಿ, ಪತ್ರಕರ್ತರಾದ ದಯಾನಂದ ಖಜೂರಿ, ಇಂಗಳಗಿ ಸಹಕಾರಿ ಬ್ಯಾಂಕಿನ ಅಧ್ಯಕ್ಷ ಮುಕ್ರುಮ್ ಪಟೇಲ್, ಗಂಗಾ ಮಾತೆ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಇಂದಿರಾ ಜಿ.ಕೆ, ಸುಶೀಲಾ ಜಾಧವ, ಖೇಮಲಿಂಗ ಬೆಳಮಗಿ, ಗುರುಪಾದ ದೊಡ್ಡಮನಿ, ಸಂದೀಪ ಜೋಗೂರ, ಭೀಮರಾವ ನಿಂಬಾಳಕರ, ಹುಸನಪ್ಪ ನಿಲಾರ, ಶಶಿಕುಮಾರ ಅರೋಳಿಕರ, ಕಿರಣ ರಾಜನಾಳ ಸೇರಿದಂತೆ ಹಲವರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಸಾಮರಸ್ಯ ಇರಲೆನ್ನುವ ಆರೆಸ್ಸೆಸ್, ಸಮಾನತೆ ಬೇಕೆಂದು ಸಾರುವುದಿಲ್ಲವೇಕೆ?

ಜಾತಿಪದ್ಧತಿಯೊಂದಿಗೆ ರಾಜಿ ಮಾಡಿಕೊಂಡ ಆರೆಸ್ಸೆ ಸ್ ಪ್ರಣೀತ ಸಾಮರಸ್ಯ ವಾದದಿಂದ ಅಸ್ಪೃಶ್ಯರು, ದಲಿತರು ಹಾಗೂ ಶೂದ್ರ ವರ್ಗದ ವಿಮುಕ್ತಿ ಸಾಧ್ಯವಿಲ್ಲ. ಜಾತಿಪದ್ಧತಿ- ವರ್ಣ- ಶಾಸ್ತ್ರ-ಸ್ಮೃತಿಗಳನ್ನು ಬೇರುಸಹಿತ ಕಿತ್ತು ಹಾಕುವ ಬಾಬಾಸಾಹೇಬರ ಸಾಮಾಜಿಕ ಸಮಾನತಾವಾದವೇ ಭಾರತದ ಬಹುಜನರ ನಿಜವಾದ ಬಿಡುಗಡೆಯ ದಾರಿ. ಆರೆಸ್ಸೆ ಸ್ ನ ಸುಧಾರಣವಾದದ ಬಣ್ಣದ ಮಾತುಗಳಿಗೆ ಬಹುಜನರು ಮರುಳಾಗಬಾರದು.

ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆಯ ಆಚರಣೆಯು ಹಿಂದೂ ಸಮಾಜಕ್ಕೆ ಕಳಂಕಪ್ರಾಯ ಎಂದು ಆರೆಸ್ಸೆ ಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಹೇಳಿದ್ದಾರೆ. ಈ ಕಳಂಕವನ್ನು ಕಾಯ್ದೆಕಾನೂನಿನ ಮೂಲಕ ಮಾತ್ರವೇ ತೊಡೆದು ಹಾಕಲು ಬರುವುದಿಲ್ಲ. ದಿನನಿತ್ಯದ ಜನಜೀವನದ ಚರ್ಯೆಯಲ್ಲಿ ಬದಲಾವಣೆಗಳಾಗಬೇಕು. ಜಾತಿಯ ಹೆಸರಿನಲ್ಲಿ ಕೀಳಾಗಿ ನಡೆಸಿಕೊಳ್ಳುವ ಯಾವುದೇ ಕ್ರಿಯೆ, ಸಮಾಜವನ್ನು (ಹಿಂದೂ) ದುರ್ಬಲಗೊಳಿಸುತ್ತದೆ ಎಂದಿದ್ದಾರೆ. ಆರೆಸ್ಸೆ ಸ್ ನಿಂದ ಇಂತಹ ಹೇಳಿಕೆಗಳು ಹೊಸತಲ್ಲ.

ಸಾಮಾಜಿಕ ಸಾಮರಸ್ಯ ಮತ್ತು ಸಾಮಾಜಿಕ ಸಮಾನತೆಯ ಮಾತುಗಳ ನಡುವೆ ಅಂತರವಿದೆ. ಆರೆಸ್ಸೆ ಸ್ ಜಾತಿಪದ್ಧತಿಯನ್ನು ಸಾಮಾಜಿಕ ಸಾಮರಸ್ಯದ ದಾರಿಯಿಂದ ದೂರ ಮಾಡಬೇಕೆನ್ನುತ್ತದೆಯೇ ವಿನಾ ಜಾತಿಪದ್ಧತಿಯನ್ನು ನಾಶಗೊಳಿಸಬೇಕು ಅಥವಾ ಅದರ ಮೂಲ ಬೇರುಗಳನ್ನು ಕಡಿದು ಹಾಕುವ ಪರ ಇಲ್ಲ. ಜಾತಿಪದ್ಧತಿಯ ಏಣಿಶ್ರೇಣಿಗಳನ್ನು, ಮೇಲ್ಜಾತಿಗಳ ವಿಶೇಷಾಧಿಕಾರಗಳನ್ನು ಯಾವುದೇ ಬಗೆಯಲ್ಲಿ ಕಳಚಿ ಹಾಕುವ ಉದ್ದೇಶ ಇಲ್ಲವೇ ಇಲ್ಲ. ಹೀಗಾಗಿ ಜಾತಿಗಳ ಜಾತಿಗಳ ನಡುವೆ ಸಾಮರಸ್ಯವನ್ನು ತಂದು ಎಲ್ಲ ಜಾತಿಗಳೂ ಶಾಂತಿಯಿಂದ ಬದುಕಿ ಬಾಳಬೇಕು ಎಂಬುದು ಆರೆಸ್ಸೆ ಸ್ ಸಿದ್ಧಾಂತ. ಆದರೆ, ನೂರಾರು ವರ್ಷಗಳ ಈ ಜಾತಿವ್ಯವಸ್ಥೆಯ ಚೌಕಟ್ಟನ್ನು ಮುರಿಯುವುದಿರಲಿ, ಸಡಿಲಿಸುವುದೂ ಸಾಧ್ಯವಾಗಿಲ್ಲ. ಹೀಗಾಗಿ ಆರೆಸ್ಸೆ ಸ್ ಪ್ರತಿಪಾದಿಸುವ ಸಾಮರಸ್ಯ ಅರ್ಥವಿಲ್ಲದ್ದು. ಕಣ್ಣೊರೆಸುವ ತಂತ್ರ ಮಾತ್ರ. ದಲಿತರು ಮತ್ತು ಆದಿವಾಸಿಗಳನ್ನು ಹಿಂದು ಸಾಂಸ್ಕೃತಿಕ ಮತ್ತು ಧಾರ್ಮಿಕ ಆಚರಣೆಗಳ ಒಳಕ್ಕೆ ಬೆಸೆಯುವುದರ ಆಚೆಗೆ ಸಾಗಲು ಅದು ಸುತರಾಂ ಸಿದ್ಧವಿಲ್ಲ.

ಹಿಂದೂಗಳು ಒಂದಾಗಿ ಬದುಕಲು ಜಾತಿ ಭೇದವನ್ನು ನಿವಾರಿಸೋಣ, ಸಾಮಾಜಿಕ ಸಾಮರಸ್ಯವನ್ನು ನಿರ್ಮಿಸೋಣ ಎನ್ನುತ್ತದೆ ಆರೆಸ್ಸೆ ಸ್.

ಜಾತಿ ವ್ಯವಸ್ಥೆಯನ್ನು ತಡವದೆ ಸಾಮಾಜಿಕ ಸಾಮರಸ್ಯವನ್ನು ತರುತ್ತೇವೆಂಬ ಮಾತು ಡಂಭಾಚಾರದ್ದು. ಬ್ರಾಹ್ಮಣವಾದಿ ಚೌಕಟ್ಟು ಮತ್ತು ಜಾತಿದತ್ತ ವಿಶೇಷಾಧಿಕಾರಗಳನ್ನು ಆರೆಸ್ಸೆ ಸ್ ಪ್ರಶ್ನಿಸಿಯೇ ಇಲ್ಲ.

ಆದರೆ ಈ ಭೇದಭಾವವನ್ನು ಜಾರಿಯಲ್ಲಿಟ್ಟಿರುವ ಜಾತಿಪದ್ಧತಿಯನ್ನೇ ನಾಶ ಮಾಡಬೇಕೆಂಬ ಕುರಿತು ಆರೆಸ್ಸೆ ಸ್ ಜಾಣ ಮೌನ ವಹಿಸಿದೆ. ಆರೆಸ್ಸೆ ಸ್ ನ ಅಸ್ಪೃಶ್ಯತೆ ವಿರೋಧವೇ ನಕಲಿ. ಜಾತಿ ಜಾತಿಗಳ ನಡುವೆ ಸಾಮರಸ್ಯದ ಮಾತಾಡುತ್ತ ಬರಲಾಗಿದೆಯೇ ವಿನಾ ಜಾತಿಯ ಬೇರನ್ನೇ ಕಡಿದು ಹಾಕುವುದರ ಪರವಾಗಿಲ್ಲ.

ಆರೆಸ್ಸೆ ಸ್ ನ ಮಹಾನ್ ಸೈದ್ಧಾಂತಿಕ ಪ್ರತಿಪಾದಕರಾದ ಎಂ.ಎಸ್.ಗೋಲ್ವಲ್ಕರ್ ಅವರ ಬಂಚ್ ಆಫ್ ಥಾಟ್ಸ್ ಕೃತಿಯಲ್ಲಿ ವರ್ಣಾಶ್ರಮ ಪದ್ಧತಿಯನ್ನು ಎತ್ತಿ ಹಿಡಿದಿದ್ದಾರೆ. ಸಮಾನತೆಗೆ ಒತ್ತು ಕೊಡದೆ ಸಾಮರಸ್ಯವನ್ನು ಬೋಧಿಸುತ್ತದೆ ಆರೆಸ್ಸೆ ಸ್. ಮೇಲ್ಜಾತಿಗಳ ವಿಶೇಷಾಧಿಕಾರಗಳನ್ನು ಕಿತ್ತು ಹಾಕಲು ಆರೆಸ್ಸೆ ಸ್ ಒಪ್ಪಿಗೆಯಿಲ್ಲ. ಕೆಳ ಜಾತಿಗಳನ್ನು ವಿಶಾಲ ಹಿಂದೂ ಛತ್ರಛಾಯೆಯ ಅಡಿಯಲ್ಲಿ ತಂದು ಮತಾಂತರವನ್ನು ತಡೆಗಟ್ಟುವುದು ಅದರ ನಿಜ ಉದ್ದೇಶ.

ಅಸ್ಪೃಶ್ಯತೆಯನ್ನು ಖಂಡಿಸಿ ಹಲವು ಠರಾವುಗಳನ್ನು ಅಂಗೀಕರಿಸಿದೆ. ಅಸ್ಪೃಶ್ಯತೆಗೆ ಧಾರ್ಮಿಕ ಅಂಗೀಕಾರ ಇಲ್ಲ ಎಂದೂ ಸಾರಿದೆ. ಸಾಮಾಜಿಕ ಸಾಮರಸ್ಯದಂತಹ ಆರೆಸ್ಸೆ ಸ್ ನ ವೇದಿಕೆಗಳು ಸಾಮರಸ್ಯ ನಿರ್ಮಾಣದಲ್ಲಿ ತೊಡಗಿವೆ. ತಳದಲ್ಲಿ ತಿಪ್ಪೆಯಿದ್ದರೂ ಮೇಲ್ಗಡೆ ರಂಗೋಲಿ ಇಟ್ಟರೆ ಸಾಕೆಂಬ ಧೋರಣೆಯಿದು.

ಅಸ್ಪೃಶ್ಯತೆಯ ಮೂಲ ಜಾತಿ ವ್ಯವಸ್ಥೆಯಲ್ಲಿದೆ. ಜಾತಿಯ ಮೂಲ ಮನುಸ್ಮೃತಿಯನ್ನು ಆಧರಿಸಿದ ಹಿಂದೂ ಧರ್ಮದಲ್ಲಿದೆ ಎಂದು ಸಾರಿ 1927ರಲ್ಲಿಯೇ ಸಾರ್ವಜನಿಕವಾಗಿ ಮನುಸ್ಮೃತಿಯನ್ನು ಸುಟ್ಟುಹಾಕಿದ್ದರು ಡಾ.ಬಾಬಾಸಾಹೇಬ ಬಿ.ಆರ್.ಅಂಬೇಡ್ಕರ

ಆದರೆ ಮಹಾನ್ ಸಮಾನತಾವಾದಿ ಬಾಬಾಸಾಹೇಬ ಡಾ.ಬಿ.ಆರ್.ಅಂಬೇಡ್ಕರ್ ಅವರು ಜಾತಿಪದ್ಧತಿಯ ಸುಧಾರಣೆಯ ಸಾಮರಸ್ಯವಾದವನ್ನು ಅತ್ಯಂತ ಪ್ರಬಲವಾಗಿ ವಿರೋಧಿಸಿದರು. ಜಾತಿಪದ್ಧತಿಯ ಮೂಲ ವರ್ಣವ್ಯವಸ್ಥೆಯಲ್ಲಿದೆ. ಇವೆರಡರ ಮೂಲವಾದ ಶಾಸ್ತ್ರಗಳು ಮತ್ತು ಸ್ಮೃತಿಗಳನ್ನು ನಾಶಪಡಿಸಬೇಕಿದೆ. ಸಮಾನತೆಯ ನಿಜವಾದ ಶತ್ರು ಜಾತಿಪದ್ಧತಿಯನ್ನು ಪಾಲಿಸುವವರಲ್ಲ, ಬದಲಾಗಿ ಈ ಪದ್ಧತಿಯನ್ನು ಎತ್ತಿ ಹಿಡಿದು ಅದನ್ನು ಪವಿತ್ರವೆಂದು ಸಾರಿರುವ ಶಾಸ್ತ್ರಗಳು ಮತ್ತು ಸ್ಮೃತಿಗಳು. ಹಿಂದುವಾಗಿ ಹುಟ್ಟಿದ್ದೇನೆ, ಆದರೆ ಹಿಂದುವಾಗಿ ಸಾಯಲಾರೆ ಎಂಬುದು ಅವರ ಪ್ರಸಿದ್ಧ ಘೋಷಣೆಯಾಗಿತ್ತು. 1956ರಲ್ಲಿ ಭಾರೀ ಸಂಖ್ಯೆಯ ದಲಿತರೊಂದಿಗೆ ಹಿಂದೂ ಧರ್ಮವನ್ನು ತಿರಸ್ಕರಿಸಿ ಬೌದ್ಧ ಧರ್ಮಕ್ಕೆ ಮತಾಂತರ ಹೊಂದಿದರು. ಸ್ವಾತಂತ್ರ್ಯ ಸಮಾನತೆ ಹಾಗೂ ಸೋದರತೆಯ ತತ್ವಗಳನ್ನು ಎತ್ತಿ ಹಿಡಿದರು.

ತಾರತಮ್ಯದ ಪದ್ಧತಿಗಳು-ಆಚರಣೆಗಳನ್ನು ಸುಧಾರಿಸುವುದು ಸಲ್ಲದು. ಸಾಮಾಜಿಕ ಧಾರ್ಮಿಕ ಹಾಗೂ ಸಾಂಸ್ಥಿಕ ಸಂರಚನೆಗಳ ಅಸಮಾನತೆಯನ್ನು ಜಾರಿಯಲ್ಲಿಟ್ಟಿದೆ ಜಾತಿ ಪದ್ಧತಿ. ಪ್ರತಿಯೊಂದು ಜಾತಿಯ ಮೇಲೆ ಅಥವಾ ಕೆಳಗೆ ಮತ್ತೊಂದು ಜಾತಿಯನ್ನು ಇರಿಸಲಾಗಿದೆ. ಜಾತಿವಿನಾಶ ಮಾಡಿ ಸ್ವಾತಂತ್ರ್ಯ, ಸಮಾನತೆ ಹಾಗೂ ಸೋದರತೆಯ ಸುತ್ತ ಸಮ ಸಮಾಜವನ್ನು ಮರು ನಿರ್ಮಿಸಬೇಕು. ಜಾತಿಯನ್ನು ನ್ಯಾಯಸಮ್ಮತಗೊಳಿಸುವ ಧಾರ್ಮಿಕ ಅಧಿಕಾರವನ್ನು ಅಂಬೇಡ್ಕರ್ ಪ್ರಶ್ನಿಸಿದ್ದರು. ಜಾತಿ ವಿನಾಶ ಆಗಬೇಕಿದ್ದರೆ ಇದು ಅತ್ಯಗತ್ಯ ಎಂಬುದು ಅವರ ದೃಢ ನಂಬಿಕೆಯಾಗಿತ್ತು.

ಹಿಂದೂ ರಾಷ್ಟ್ರದ ನಿರ್ಮಾಣ ಆರೆಸ್ಸೆ ಸ್ ನ ಅಂತಿಮ ಗುರಿ. ಒಂದು ವೇಳೆ ಹಿಂದೂ ರಾಜ್ಯ ನಿರ್ಮಾಣ ಆದಲ್ಲಿ, ಅದಕ್ಕಿಂತ ದೊಡ್ಡ ವಿಪತ್ತು ಈ ದೇಶಕ್ಕೆ ಮತ್ತೊಂದಿಲ್ಲ. ಹಿಂದೂಗಳು ಏನು ಬೇಕಾದರೂ ಹೇಳಿಕೊಳ್ಳಲಿ, ವಾಸ್ತವದಲ್ಲಿ ಹಿಂದೂವಾದವು ಸ್ವಾತಂತ್ರ್ಯ, ಸಮಾನತೆ ಹಾಗೂ ಸೋದರತೆಗೆ ಮಾರಕ. ಹೀಗಾಗಿ ಹಿಂದೂವಾದವು ಜನತಂತ್ರ ವ್ಯವಸ್ಥೆಯ ವಿರೋಧಿ. ಯಾವ ಬೆಲೆಯನ್ನು ತೆತ್ತಾದರೂ ಸರಿ, ಹಿಂದೂರಾಜ್ಯವನ್ನು ತಡೆಯಲೇಬೇಕು ಎಂದಿದ್ದರು ಬಾಬಾಸಾಹೇಬರು.

''ಇಂದಿನ ಸಂದರ್ಭದಲ್ಲಿ ನಾವು ನಮ್ಮ ಎಲ್ಲ ಶಕ್ತಿ ಸಂಪನ್ಮೂಲಗಳನ್ನು ಒಗ್ಗೂಡಿಸಿ ಮಾಡಬೇಕಾದ ತುರ್ತು ಕೆಲಸವೆಂದರೆ ಸವರ್ಣೀಯ ಹಿಂದೂಗಳ ಸೈನಿಕ ತರಬೇತಿ. ಆ ತರಬೇತಿಯನ್ನು ಪಡೆದವರು ಆನಂತರದಲ್ಲಿ ಹಿಂದೂ ಧರ್ಮವನ್ನು ತೊರೆಯುವವರನ್ನು ಮತ್ತು ಆ ರೀತಿ ಹಿಂದೂ ಶ್ರದ್ಧೆಯನ್ನು ತೊರೆಯುವಂತೆ ಮಾಡುವವರನ್ನು ಶಿಕ್ಷಿಸಲು ಸಮರ್ಥರಾಗುತ್ತಾರೆ'' ಎಂದು ಹಿಂದೂ ಮಹಾಸಭಾದ ಪ್ರಮುಖ ನಾಯಕ ಮತ್ತು ಆರೆಸ್ಸೆ ಸ್ ನ ಸಂಸ್ಥಾಪಕ ಸದಸ್ಯರಲ್ಲಿ ಒಬ್ಬರಾದ ಡಾ. ಬಿ.ಎಸ್. ಮೂಂಜೆ ತಮ್ಮ ದಿನಚರಿಯಲ್ಲಿ ನಮೂದಿಸಿದ್ದಾರೆ.

1932ರ ಪೂನಾ ಒಪ್ಪಂದದಲ್ಲಿ ಗಾಂಧಿ ನೀಡಿದ ದಲಿತೋದ್ಧಾರದ ಒಪ್ಪಂದಕ್ಕೆ ಹಿಂದೂ ಸಮಾಜದ ಪರವಾಗಿ ಸಹಿ ಹಾಕಿದವರಲ್ಲಿ ಮೂಂಜೆಯವರೂ ಒಬ್ಬರಾಗಿದ್ದರು. ಆದರೂ ಅವರು ಅಸ್ಪೃಶ್ಯರು ಮತ್ತು ಅಂಬೇಡ್ಕರ್ ಕುರಿತು ತಮಗಿದ್ದ ದ್ವೇಷವನ್ನು 1935ರಲ್ಲಿ ಕಾರಿಕೊಂಡಿದ್ದರು: ''..ಅಂಬೇಡ್ಕರ್ ಮತ್ತು ಅಸ್ಪೃಶ್ಯರ ಮೇಲೆ ಹಣ ಖರ್ಚು ಮಾಡುವುದು ಹಾವಿಗೆ ಹಾಲೆರೆದಂತೆ. ಇವರಿಗೆ ಯಾವುದೇ ನೆರವು ನೀಡಕೂಡದು. ಅವರ ಕಷ್ಟಗಳನ್ನು ಅವರೇ ಅನುಭವಿಸಲು ಬಿಟ್ಟುಬಿಡಬೇಕು'' ಎಂದಿದ್ದರು ಮೂಂಜೆ.

ಅಂಬೇಡ್ಕರ್ ಅವರು ನಡೆಸಿದ ಮಹಾಡ್ ಸತ್ಯಾಗ್ರಹ ಅಥವಾ ಕಾಳಾರಾಮ್ ದೇವಸ್ಥಾನ ಪ್ರವೇಶ ಹೋರಾಟವನ್ನು ಆರೆಸ್ಸೆ ಸ್ ಬೆಂಬಲಿಸಿರಲಿಲ್ಲ, ಬದಲಾಗಿ ವಿರೋಧಿಸಿತ್ತು.

ಜಾತಿ ಪದ್ಧತಿಯೊಂದಿಗೆ ರಾಜಿ ಮಾಡಿಕೊಂಡ ಆರೆಸ್ಸೆ ಸ್ ಪ್ರಣೀತ ಸಾಮರಸ್ಯ ವಾದದಿಂದ ಅಸ್ಪೃಶ್ಯರು, ದಲಿತರು ಹಾಗೂ ಶೂದ್ರ ವರ್ಗದ ವಿಮುಕ್ತಿ ಸಾಧ್ಯವಿಲ್ಲ. ಜಾತಿಪದ್ಧತಿ- ವರ್ಣ- ಶಾಸ್ತ್ರ-ಸ್ಮೃತಿಗಳನ್ನು ಬೇರುಸಹಿತ ಕಿತ್ತು ಹಾಕುವ ಬಾಬಾಸಾಹೇಬರ ಸಾಮಾಜಿಕ ಸಮಾನತಾವಾದವೇ ಭಾರತದ ಬಹುಜನರ ನಿಜವಾದ ಬಿಡುಗಡೆಯ ದಾರಿ. ಆರೆಸ್ಸೆ ಸ್ ನ ಸುಧಾರಣವಾದದ ಬಣ್ಣದ ಮಾತುಗಳಿಗೆ ಬಹುಜನರು ಮರುಳಾಗಬಾರದು.

ಕತ್ತಲೆಯಿಂದ ಬೆಳಕಿನತ್ತ ಸೌಜನ್ಯ ಹೋರಾಟ: ಸುಪ್ರೀಂ ಆದೇಶದೊಂದಿಗೆ ಮೂಡಿದ ಹೊಸ ಭರವಸೆ!



ಸೌಜನ್ಯ ಅತ್ಯಾಚಾರ, ಕೊಲೆ ಪ್ರಕರಣವು ಕೇವಲ ಒಂದು ಕಾನೂನು ಪ್ರಕ್ರಿಯೆಯಾಗಿ ಉಳಿಯದೆ, ಸಾರ್ವಜನಿಕ ಜಾಗೃತಿ ಮತ್ತು ನ್ಯಾಯದ ಪರವಾದ ಗಟ್ಟಿಯಾದ ಧ್ವನಿಯಾಗಿ ಮಾರ್ಪಟ್ಟಿದೆ. ಸುಪ್ರೀಂ ಕೋರ್ಟ್‌ನ ಈ ಹೊಸ ಆದೇಶವು ಸೌಜನ್ಯ ಕುಟುಂಬಕ್ಕೆ ಮತ್ತು ನ್ಯಾಯಕ್ಕಾಗಿ ಕಾಯುತ್ತಿರುವ ಸಾರ್ವಜನಿಕರಿಗೆ ಹೊಸ ಭರವಸೆಯನ್ನು ಮೂಡಿಸಿದೆ ಎನ್ನುತ್ತಾರೆ ಹೋರಾಟಗಾರರು.

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯಲ್ಲಿ ನಡೆದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣವು ಕೇವಲ ಒಂದು ಅಪರಾಧ ಘಟನೆಯಾಗಿ ಉಳಿಯದೆ, ಕರಾವಳಿ ಭಾಗದಲ್ಲಿ ಸಾರ್ವಜನಿಕ ಆಕ್ರೋಶ ಮತ್ತು ಸುದೀರ್ಘ ಸಾಮಾಜಿಕ-ನ್ಯಾಯಾಂಗ ಹೋರಾಟದ ಪ್ರತೀಕವಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ನ್ಯಾಯಾಲಯದ ತೀರ್ಪು ಬಂದ ನಂತರ ಮತ್ತು ಬುರುಡೆ ಎಸ್‌ಐಟಿ ತನಿಖೆಯ ಘಟನಾವಳಿಗಳ ಬಳಿಕ, ಸಂತ್ರಸ್ತ ಕುಟುಂಬಕ್ಕೆ ನ್ಯಾಯ ಒದಗಿಸಲು ಧ್ವನಿ ಎತ್ತುವ ಹೋರಾಟವು ಕೊಂದವರು ಯಾರು? ತಂಡದ ಹುಟ್ಟಿನ ಮೂಲಕ ಹೊಸ ಆಯಾಮವನ್ನು ಪಡೆದುಕೊಂಡಿತು. ಇದೀಗ ಸುಪ್ರೀಂ ಕೋರ್ಟ್ ಮರು ತನಿಖೆಗೆ ಆದೇಶ ನೀಡಿರುವುದು ಹೋರಾಟಕ್ಕೆ ಹೊಸ ಭರವಸೆ ತುಂಬಿದೆ.

ಸುಪ್ರೀಂ ಕೋರ್ಟ್ ಐತಿಹಾಸಿಕ ಆದೇಶ ನೀಡುವ ಮೂಲಕ ನೊಂದ ಕುಟುಂಬ ಮತ್ತು ನ್ಯಾಯಕ್ಕಾಗಿ ಹೋರಾಡುತ್ತಿರುವ ಜನರಲ್ಲಿ ಹೊಸ ಭರವಸೆ ಮೂಡಿಸಿದೆ. 14 ವರ್ಷಗಳ ಸುದೀರ್ಘ ಕಾಯುವಿಕೆಯ ನಂತರ ಸಿಕ್ಕ ಈ ಆದೇಶವನ್ನು ಸೌಜನ್ಯಾ ತಾಯಿ ಕುಸುಮಾವತಿ ಗೌಡ ಅವರು ಸ್ವಾಗತಿಸಿದ್ದು, ಮಾಧ್ಯಮಗಳಿಗೆ ಪ್ರತಿಕ್ರಿಯಿಸುತ್ತಾ, ''ಕೊನೆಗೂ ನ್ಯಾಯ ಸಿಗುವ ಭರವಸೆ ಮೂಡಿದೆ'' ಎಂದು ಭಾವುಕರಾಗಿದ್ದಾರೆ.

ಸದ್ಯ ಪ್ರಕರಣದ ಸಂಪೂರ್ಣ ಮರುತನಿಖೆಗಾಗಿ ಹೊಸದಾಗಿ ವಿಶೇಷ ತನಿಖಾ ತಂಡವನ್ನು () ರಚಿಸಲು ಆದೇಶಿಸಲಾಗಿದೆ. ಈ ಹಿಂದೆ ಸಿಐಡಿ ಅಥವಾ ಸಿಬಿಐ ತನಿಖಾ ತಂಡದಲ್ಲಿದ್ದ ಯಾವುದೇ ಅಧಿಕಾರಿಯನ್ನು ಹೊಸ ಎಸ್‌ಐಟಿಗೆ ಸೇರಿಸಬಾರದು ಎಂದು ಕೋರ್ಟ್ ಕಟ್ಟುನಿಟ್ಟಾಗಿ ಸೂಚಿಸಿದೆ. ಸಂಪೂರ್ಣವಾಗಿ ಪ್ರಾಮಾಣಿಕ ಹಾಗೂ ಹೊಸ ಅಧಿಕಾರಿಗಳ ತಂಡವೇ ತನಿಖೆ ನಡೆಸಬೇಕಿದೆ. ಮೂರು ತಿಂಗಳೊಳಗೆ ತನಿಖೆಯನ್ನು ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ಸಮಗ್ರ ವರದಿ ಸಲ್ಲಿಸಬೇಕು ಎಂದು ಗಡುವು ವಿಧಿಸಲಾಗಿದೆ. ಸುಪ್ರೀಂ ಕೋರ್ಟ್ ಆದೇಶದ ಮತ್ತೊಂದು ನಿರ್ಣಾಯಕ ಅಂಶವೆಂದರೆ ಸಂತೋಷ್ ರಾವ್ ಅವರನ್ನು ಈ ಪ್ರಕರಣದಲ್ಲಿ ಮತ್ತೆ ತನಿಖೆಗೆ ಒಳಪಡಿಸುವಂತಿಲ್ಲ ಎಂಬುದು. ಸಂತೋಷ್ ರಾವ್ ಅವರನ್ನು ಈಗಾಗಲೇ ವಿಚಾರಣೆಗೊಳಪಡಿಸಿ, ಸೆಷನ್ಸ್ ಕೋರ್ಟ್ ಖುಲಾಸೆಗೊಳಿಸಿರುವುದರಿಂದ ಅವರಿಗೆ ಸಂವಿಧಾನದ ಅನುಚ್ಛೇದ 20(2) ಹಾಗೂ ಯ ಸೆಕ್ಷನ್ 300 ಅಡಿಯಲ್ಲಿ ರಕ್ಷಣೆ ಇದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಈ ಬಗ್ಗೆ ಈದಿನ ಡಾಟ್ ಕಾಮ್‌ಗೆ ಪ್ರತಿಕ್ರಿಯಿಸಿರುವ ಕೊಂದವರು ಯಾರು? ತಂಡದ ಪ್ರಮುಖ ಹೋರಾಟಗಾರ್ತಿ ಮಲ್ಲಿಗೆ ಸಿರಿಮನೆ, ''ಈವರೆಗೆ ಕೊಂದವರು ಯಾರು ತಂಡ ಯಾವೆಲ್ಲ ವಿಚಾರವನ್ನು ಪ್ರಶ್ನಿಸುತ್ತಿತ್ತೋ ಮತ್ತು ಹೇಳುತ್ತಿತ್ತೋ, ಅದನ್ನೇ ಸುಪ್ರೀಂ ಕೋರ್ಟ್ ಕೂಡ ಹೇಳಿದೆ. ಧರ್ಮಸ್ಥಳದಲ್ಲಿ ನಡೆದಿರುವುದು ಒಂದೆರಡು ಪ್ರಕರಣವಲ್ಲ. ಹಲವು ಪ್ರಕರಣಗಳಿವೆ. ಹಲವು ತನಿಖಾ ಸಂಸ್ಥೆಗಳು ತನಿಖೆ ನಡೆಸಿದರೂ ತನಿಖೆಯ ದಿಕ್ಕನ್ನು ಇಷ್ಟೊಂದು ಬಾರಿ ತಪ್ಪಿಸಲು ಹೇಗೆ ಸಾಧ್ಯ ಎಂಬುದು ನಮ್ಮ ಪ್ರಶ್ನೆಯಾಗಿತ್ತು. ಒಂದು ಪ್ರಕರಣದಲ್ಲಿ ಸಾಕ್ಷಿ ನಾಶ ಮಾಡಬಹುದು. ಆದರೆ ಸರಣಿಯಾಗಿ ಹೆಣ್ಣುಮಕ್ಕಳ ಕೊಲೆಯಾಗುತ್ತದೆ, ಭಕ್ತಾದಿಗಳು ಶವವಾಗಿ ಪತ್ತೆಯಾಗುತ್ತಾರೆ, ಅಸಹಜವಾಗಿ ನೂರಾರು ಸಾವು ಸಂಭವಿಸುತ್ತದೆ. ಆದರೆ ಯಾವುದೇ ಒಬ್ಬ ತನಿಖಾಧಿಕಾರಿಗೂ ಈ ಒಟ್ಟಾರೆ ಸನ್ನಿವೇಶ ಅನುಮಾನಾಸ್ಪದವಾಗಿದೆ ಎಂದು ಅನಿಸಲಿಲ್ಲವೇ? ಇದು ಹೇಗೆ ಸಾಧ್ಯ ಎಂಬುದು ನಮ್ಮ ಪ್ರಧಾನವಾದ ಪ್ರಶ್ನೆಯಾಗಿತ್ತು. ಸೌಜನ್ಯ ತಾಯಿ ಕುಸುಮಾವತಿ, ಅವರ ಕುಟುಂಬಸ್ಥರ ಪ್ರಶ್ನೆಯೂ ಇದೇ ಆಗಿತ್ತು'' ಎಂದು ಹೇಳಿದ್ದಾರೆ.

ಕೊಂದವರು ಯಾರು? ತಂಡದ ಪ್ರಮುಖ ಮಹಿಳಾ ಹೋರಾಟಗಾರ್ತಿ ಮಲ್ಲಿಗೆ ಸಿರಿಮನೆ

''ಪದ್ಮಲತಾ ಅಕ್ಕ ಇಂದ್ರಾವತಿ ಅವರಂತು ಉತ್ತರಿಸಲಾಗದ ಪ್ರಶ್ನೆಯನ್ನು ಕೇಳಿದ್ದರು. ಇವು ಪತ್ತೆಹಚ್ಚಲಾಗದ ಪ್ರಕರಣಗಳಾ ಅಥವಾ ಪತ್ತೆಹಚ್ಚದೆ ಬಿಟ್ಟಿರುವ ಪ್ರಕರಣಗಳಾ ಎಂದು ಪ್ರಶ್ನಿಸಿದ್ದರು. ಇದು ನೊಂದ ಕುಟುಂಬಗಳ ಸದಸ್ಯರ ಪ್ರಶ್ನೆಗಳೂ ಆಗಿತ್ತು. ಇಂದು ಸುಪ್ರೀಂ ಕೋರ್ಟ್‌ಗೆ ಹೇಗನಿಸಿದೆಯೋ, ನಮಗೆಲ್ಲರಿಗೂ ಹಾಗೆಯೇ ಅನಿಸಿದೆ'' ಎಂದರು.

''ನಾವು ಬೆಳ್ತಂಗಡಿಯಲ್ಲಿ ಮಹಿಳಾ ನ್ಯಾಯ ಸಮಾವೇಶ ನಡೆಸಿದ್ದು ಇದೊಂದೇ ವಿಚಾರದಲ್ಲಿ ಅಲ್ಲ. ಗುಜರಾತ್, ಜಮ್ಮು, ದೆಹಲಿ, ಕೇರಳ, ಕರ್ನಾಟಕ ಎಲ್ಲೇ ಆದರೂ ಧರ್ಮ, ಪಿತೃಪ್ರಧಾನತೆ ಒಂದಕ್ಕೊಂದು ಸೇರಿಕೊಂಡಿದೆ. ಅದು ಯಾವುದೇ ಧರ್ಮವಾಗಲಿ ಮಹಿಳೆಯರನ್ನೇ ಬಲಿಪಶುಗಳನ್ನಾಗಿಸುತ್ತಾ ಬಂದಿದೆ, ಧಮನಿತರನ್ನೇ ಧಮನಿಸುತ್ತಾ ಬಂದಿದೆ. ಅಂತಹ ಅನ್ಯಾಯದ ವಿಚಾರದಲ್ಲಿ ನ್ಯಾಯ ಸಿಗಬೇಕು ಎಂದು ಕೇಳುವುದು ಮುಖ್ಯ ಎಂಬುದನ್ನು ನಾವು ಹೇಳಿದ್ದು. ಈಗ ಸುಪ್ರೀಂ ಕೋರ್ಟ್ ಕೂಡಾ ಅದನ್ನೇ ಹೇಳಿದೆ'' ಎಂದು ತಿಳಿಸಿದ್ದಾರೆ.

''ಸುಪ್ರೀಂ ಕೋರ್ಟ್ ತನಿಖೆಗೆ ಮೂರು ತಿಂಗಳ ಗಡುವು ನೀಡಿರುವುದು ಸ್ವಾಗತಾರ್ಹ. ಇವೆಲ್ಲವನ್ನು ಕೊಂದವರು ಯಾರು? ಆಂದೋಲನ ಸ್ವಾಗತಿಸುತ್ತೇವೆ. ಎಲ್ಲ ನೊಂದ ಕುಟುಂಬದ ಸದಸ್ಯರು, ಸೌಜನ್ಯ ತಾಯಿ ಕುಸುಮಾವತಿ ಅವರು ಧೈರ್ಯದಿಂದ, ಬಿಡದಂತೆ ಈ ಹೋರಾಟ ನಡೆಸಿದ್ದಕ್ಕೆ ಅವರಿಗೂ ಹೃದಯಪೂರ್ವಕ ಧನ್ಯವಾದಗಳು. ನ್ಯಾಯದ ನಿರೀಕ್ಷೆ ಹೆಚ್ಚಾಗಿದೆ. ಈಗಾದರೂ ಸೂಕ್ತವಾದ, ನಿಜವಾದ ನ್ಯಾಯ ಸಿಗಬಹುದು ಎಂಬ ಆಶಾವಾದ ನಮ್ಮೆಲ್ಲರಲ್ಲಿ ಬಲವಾಗಿದೆ'' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಷ್ಟ್ರೀಯ ಮಹಿಳಾ ಫೆಡರೇಷನ್ () ಕರ್ನಾಟಕ ರಾಜ್ಯ ಘಟಕದ ಮುಖಂಡೆ ಜ್ಯೋತಿ ಎ ಪ್ರತಿಕ್ರಿಯಿಸುತ್ತಾ, ''ಸುಪ್ರೀಂ ಕೋರ್ಟ್ ಆದೇಶವನ್ನು ಮತ್ತು ಕೊಂದವರು ಯಾರು ತಂಡ ತುಂಬು ಹೃದಯದಿಂದ ಸ್ವಾಗತಿಸುತ್ತದೆ. ಧರ್ಮಸ್ಥಳದಲ್ಲಿ ನಡೆದಿರುವ ಅನ್ಯಾಯಗಳ ವಿರುದ್ಧ ನಡೆಯುತ್ತಿರುವ ಹೋರಾಟಗಳಲ್ಲಿ ಸೌಜನ್ಯ ಒಂದು ಭಾಗ. ಹಾಗಾಗಿ ಸುಪ್ರೀಂ ಕೋರ್ಟ್ ಆದೇಶ ಒಂದು ಹೆಜ್ಜೆ ಜಯವಾಗಿದೆ ಎಂದು ಅಭಿಪ್ರಾಯ. ಈ ವಿಚಾರದಲ್ಲಿ ಸೌಜನ್ಯ ಅವರಿಗೆ ತಾಯಿಗೆ ಅಭಿನಂದನೆ ತಿಳಿಸುತ್ತೇವೆ. ಅವರ ನಿರಂತರ ಹೋರಾಟ ಮೆಚ್ಚುವಂತದ್ದು'' ಎಂದು ಹೇಳಿದರು. ಹಾಗೆಯೇ ಎಲ್ಲಾ ಹೋರಾಟಗಾರರಿಗೂ ಅಭಿನಂದನೆ ತಿಳಿಸಿದರು.

''ಈ ಹಿಂದೆ ಈ ಪ್ರಕರಣದಲ್ಲಿ ತನಿಖೆ ನಡೆಸಿದವರು ಮತ್ತೆ ತನಿಖೆಯಲ್ಲಿ ಸೇರಿಸಬಾರದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದು ಸೂಕ್ತವಾದ, ಸರ್ಕಾರಕ್ಕೆ ಚಳಿ ಬಿಡುಸುವಂತಹ ಆದೇಶ. ಸರಿಯಾದ ದಿಕ್ಕಿನಲ್ಲಿ ಸಾಗಿದರೆ ನ್ಯಾಯ ಸಿಗುವ ನಮಗೆ ಭರವಸೆಯಿದೆ. ಸರ್ಕಾರ ಈ ಆದೇಶವನ್ನು ಸರಿಯಾಗಿ ಪಾಲಿಸಬೇಕು ಎಂದು ಒತ್ತಾಯಿಸುತ್ತೇವೆ. ಸರ್ಕಾರ ಯಾವುದೇ ತರಹದ ಆಟವಾಡಬಾರದು. ಆರೋಪಿಗಳನ್ನು ರಕ್ಷಿಸುವ ಕೆಲಸವನ್ನು ಸರ್ಕಾರ ಮಾಡಬಾರದು. ಸರ್ಕಾರ ಯಾವುದೇ ಒತ್ತಡಕ್ಕೆ ಮಣಿಯಬಾರದು. ಎಸ್‌ಐಟಿ ರಚಿಸುವಾಗ ಆರೋಪಿಗಳಿಗೆ ನಿಷ್ಠೆ ಇರುವವರನ್ನು ಅಲ್ಲ, ಸತ್ಯಕ್ಕೆ ನಿಷ್ಠೆ ಇರುವವರನ್ನು ನೇಮಿಸಬೇಕು. ನ್ಯಾಯಕ್ಕೆ ನಿಷ್ಠೆ ಹೊಂದಿರುವವರು'' ಎಂದು ಆಗ್ರಹಿಸಿದರು.

''ಈ ಹಿಂದೆ ಮಾಡಿದ ತಪ್ಪನ್ನೇ ಮತ್ತೆ ಮಾಡಿದರೆ ಈ ಸರ್ಕಾರಕ್ಕೆ ಉಳಿಗಾಲವಿರಲ್ಲ ಎಂಬುದು ಪ್ರಜ್ಞಾವಂತರು ಸರ್ಕಾರಕ್ಕೆ ನೀಡುವ ಎಚ್ಚರಿಕೆ. ಯಾರಿಗೂ ಮಣಿಯದ ಅಧಿಕಾರಿಗಳನ್ನು ಈ ತನಿಖೆಗೆ ನೇಮಿಸಬೇಕು ಎಂಬುದು ನನ್ನ ಅಭಿಪ್ರಾಯ. ಹಾಗೆಯೇ ಎಸ್‌ಐಟಿ ತಂಡಕ್ಕೆ ಕೆಲಸ ಮಾಡಲು ಬಿಡಬೇಕು. ಸರ್ಕಾರ, ಹಿರಿಯ ಅಧಿಕಾರಿಗಳು ಪದೇ ಪದೇ ಒತ್ತಡ ಹಾಕದೆ, ನ್ಯಾಯವಾಗಿ ಕೆಲಸ ಮಾಡಲು ಬಿಡಬೇಕು'' ಎಂದು ಒತ್ತಾಯಿಸಿದರು.

ಇನ್ನು ಸ್ತ್ರೀವಾದಿ ಲೇಖಕಿ, ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಪ್ರೊ. ಆರ್. ಸುನಂದಮ್ಮ, ''ಈ ಆದೇಶ ಕೊಂದವರು ಯಾರು ಅಭಿಯಾನಕ್ಕೆ ಭರವಸೆ ನೀಡಿದೆ. ನಿಷ್ಪಕ್ಷಪಾತವಾಗಿ ತನಿಖೆ ನಡೆಸುವ ಅಧಿಕಾರಿಗಳನ್ನು ಎಸ್‌ಐಟಿಯಲ್ಲಿ ನೇಮಿಸಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸುತ್ತೇವೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೇಳಿಕೆ ಪಡೆಯುವಾಗ ಸೌಜನ್ಯ ತಾಯಿ, ಕುಟುಂಬಸ್ಥರ ಹೇಳಿಕೆಯನ್ನೇ ಪ್ರಧಾನವಾಗಿ ಪರಿಗಣಿಸಬೇಕು'' ಎಂದು ಆಗ್ರಹಿಸಿದರು.

ಸ್ತ್ರೀವಾದಿ ಲೇಖಕಿ, ಕರ್ನಾಟಕ ಲೇಖಕಿಯರ ಸಂಘದ ನೂತನ ಅಧ್ಯಕ್ಷೆ ಪ್ರೊ. ಆರ್. ಸುನಂದಮ್ಮ

''ಈ ಪ್ರಕರಣದಲ್ಲಿ ನ್ಯಾಯ ಸಿಕ್ಕಿದರೆ ಮುಂದೆ ಈ ತರಹದ ಅಪರಾಧ ಎಸಗುವವರಿಗೆ ಪಾಠವಾಗಲಿದೆ. ಎಷ್ಟೇ ವರ್ಷವಾದರೂ ಶೋಧಿಸಿ ಇಂತಹ ಪ್ರಕರಣಗಳನ್ನು ಹೊರತರಬಹುದು ಎಂಬ ಭಯವನ್ನು ಅಪರಾಧ ಎಸಗುವವರಲ್ಲಿ ಮೂಡಿಸಲೂ ಸಾಧ್ಯವಾಗುತ್ತದೆ. ಇಂದಿಗೂ ಹಲವು ಹೆಣ್ಣುಮಕ್ಕಳು ಇಂತಹ ಅಪರಾಧಕ್ಕೆ ಒಳಗಾಗುತ್ತಿದ್ದಾರೆ. ಈ ಪಿತೃಪ್ರಭುತ್ವ ಸಮಾಜದಲ್ಲಿ ಗಂಡಿನ ಮೇಲೆ ಸೇಡು ತೀರಿಸಬೇಕು ಎಂಬ ಸಿಟ್ಟಿಗೂ ಕೊನೆಗೆ ಹೆಣ್ಣೇ ಬಲಿಯಾಗುವುದು'' ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಏನಿದು ಸೌಜನ್ಯ ಕೊಲೆ ಪ್ರಕರಣ?

2012ರ ಅಕ್ಟೋಬರ್ 9ರಂದು ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಉಜಿರೆಯ ಧರ್ಮಸ್ಥಳದ ಬಳಿ 17 ವರ್ಷದ ಕಾಲೇಜು ವಿದ್ಯಾರ್ಥಿನಿ ಸೌಜನ್ಯಳನ್ನು ಅಪಹರಿಸಿ ಅತ್ಯಾಚಾರ ಮಾಡಲಾಗಿತ್ತು. ಮರುದಿನ ಆಕೆಯ ಮೃತದೇಹ ನೇತ್ರಾವತಿ ಸ್ನಾನಘಟ್ಟದ ಬಳಿಯ ಪೊದೆಯಲ್ಲಿ ಸಿಕ್ಕಿತ್ತು. ಅಂದಿನಿಂದ ಇಂದಿನವರೆಗೂ ಸೌಜನ್ಯ ಕುಟುಂಬ ಮತ್ತು ಮಹಿಳಾಪರ ಹೋರಾಟಗಾರರು ನಿರಂತರವಾಗಿ ಹೋರಾಟ ನಡೆಸುತ್ತಲೇ ಇದ್ದಾರೆ. ಕಳೆದೊಂದು ವರ್ಷದಿಂದ ಮಹಿಳಾಪರ ಹೋರಾಟಗಾರರು, ಲೇಖಕಿಯರು ಕೊಂದವರು ಯಾರು? ಎಂಬ ಆಂದೋಲನ ಕಟ್ಟಿಕೊಂಡು ಸೌಜನ್ಯ ಮಾತ್ರವಲ್ಲದೆ ಧರ್ಮಸ್ಥಳ ಆಸುಪಾಸಿನಲ್ಲಿ ನಡೆದ ಮಹಿಳೆಯರ ಅಸಹಜ ಸಾವಿನ ತನಿಖೆಗೆ ಆಗ್ರಹಿಸಿ ನಿರಂತರವಾಗಿ ಹೋರಾಟ ನಡೆಸುತ್ತಿದ್ದಾರೆ.

ಸೌಜನ್ಯ ಪ್ರಕರಣವನ್ನು 2013ರಲ್ಲಿ ಸಿಬಿಐಗೆ ವರ್ಗಾಯಿಸಲಾಗಿತ್ತು. ನಂತರ 2015ರಲ್ಲಿ ಮಂಗಳೂರಿನಿಂದ ಬೆಂಗಳೂರಿನ ವಿಶೇಷ ಸಿಬಿಐ ನ್ಯಾಯಾಲಯಕ್ಕೆ ವರ್ಗಾಯಿಸಲಾಗಿತ್ತು. ಈ ನಡುವೆ ಪ್ರಕರಣದ ಸಾಕ್ಷಿಯಾಗಿದ್ದ ರವಿ ಪೂಜಾರಿ ಎಂಬುವವರು ನಿಗೂಢವಾಗಿ ಸಾವನ್ನಪ್ಪಿದ್ದರು. ಸೌಜನ್ಯ ಅತ್ಯಾಚಾರ ಕೊಲೆ ನಡೆದ ಎರಡು ದಿನದಲ್ಲೇ ಸಂತೋಷ್ ರಾವ್ ಎಂಬಾತನ ಬಂಧನ ಮಾಡಲಾಗಿತ್ತು. ಸುಮಾರು 11 ವರ್ಷಗಳ ಕಾಲ ಸಂತೋಷ್ ಜೈಲಿನಲ್ಲಿದ್ದರು. ಆದರೆ ಪ್ರಕರಣದ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಿ.ಬಿ ಸಂತೋಷ್ ಅವರು 2023ರಲ್ಲಿ ಸಂತೋಷ ರಾವ್ ಪ್ರಕರಣದಲ್ಲಿ ನಿರ್ದೋಷಿ ಎಂದು ಘೋಷಿಸಿದ್ದರು. ಇವಿಷ್ಟು ನಡೆಯುತ್ತಿದ್ದಂತೆ ನಿಜಕ್ಕೂ ಈ ನೀಚ ಕೃತ್ಯವನ್ನು ಎಸಗಿದವರು ಯಾರು ಎಂಬ ಪ್ರಶ್ನೆ ಪ್ರಶ್ನೆಯಾಗಿಯೇ ಉಳಿದಿದೆ.

ಇದಾದ ಬಳಿಕ ಸೌಜನ್ಯ ಕುಟುಂಬ ಪ್ರಕರಣದ ಮರುತನಿಖೆಗೆ ಕೋರಿ ಹೈಕೋರ್ಟ್ ಮೊರೆ ಹೋಯಿತು. ಒಂದು ವರ್ಷಗಳ ಕಾಲ ದೀರ್ಘ ಹೋರಾಟ ನಡೆಸಿತು. ಆದರೆ 2024ರ ಸೆಪ್ಟೆಂಬರ್‌ನಲ್ಲಿ ಹೈಕೋರ್ಟ್ ಈ ಪ್ರಕರಣದ ಮರುತನಿಖೆ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ವಜಾಗೊಳಿಸಿತು. ಈ ಆದೇಶವನ್ನು ಪ್ರಶ್ನಿಸಿ ತಾಯಿ ಕುಸುಮಾವತಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದು, ಇದೀಗ ಹೊಸ ಭರವಸೆ ನೀಡುವ ಆದೇಶ ಹೊರಬಿದ್ದಿದೆ.

ಬರುಡೆ ಎಸ್‌ಐಟಿ ಎಂಬ ಟೀಕೆಗೆ ಗುರಿಯಾದ ಎಸ್‌ಐಟಿ ತನಿಖೆ

ಅಕ್ರಮವಾಗಿ ಹಲವು ಮಂದಿಯ ಮೃತದೇಹವನ್ನು ಹೂಳಲಾಗಿದೆ ಎಂಬ ದೂರಿನ ತನಿಖೆಗೆ ಸಂಬಂಧಿಸಿದಂತೆ ಈ ಹಿಂದೆ ಸರ್ಕಾರ ರಚಿಸಿದ್ದ ಎಸ್‌ಐಟಿ (ವಿಶೇಷ ತನಿಖಾ ತಂಡ) ತನಿಖೆಯು ನಿಜವಾದ ಅಪರಾಧಿಗಳನ್ನು ಪತ್ತೆಹಚ್ಚಲು ವಿಫಲವಾಯಿತು ಎಂಬ ಟೀಕೆಗಳು ಕೇಳಿಬಂದವು. ಸಾರ್ವಜನಿಕರು ಮತ್ತು ಸಾಮಾಜಿಕ ಹೋರಾಟಗಾರರು ಈ ತನಿಖಾ ಪ್ರಕ್ರಿಯೆಯನ್ನು ಬುರುಡೆ ಎಸ್‌ಐಟಿ ಎಂದು ಕಟುವಾಗಿ ಟೀಕಿಸಿದರು. ಈ ತನಿಖಾ ಪ್ರಹಸನವು ಸಾರ್ವಜನಿಕರ ಅಪನಂಬಿಕೆಯನ್ನು ಮತ್ತಷ್ಟು ಹೆಚ್ಚಿಸಿತು. ಇದರಿಂದಾಗಿ, ಪ್ರಕರಣವನ್ನು ಸಂಪೂರ್ಣವಾಗಿ ಮರುತನಿಖೆ ನಡೆಸಿ, ನೈಜ ಆರೋಪಿಗಳನ್ನು ಪತ್ತೆಹಚ್ಚಬೇಕೆಂಬ ಒತ್ತಾಯ ಕರಾವಳಿಯಾದ್ಯಂತ ತೀವ್ರ ಸ್ವರೂಪ ಪಡೆದುಕೊಂಡಿತು.

ಕೊಂದವರು ಯಾರು? ಸಂಘಟನೆಯ ಹುಟ್ಟು; ಆಶಾಕಿರಣ

ಬುರುಡೆ ಎಸ್‌ಐಟಿ ತನಿಖೆಯ ವಿಫಲತೆ ಮತ್ತು ಮರುತನಿಖೆಯ ತೀವ್ರ ಒತ್ತಾಯದ ಹಿನ್ನೆಲೆಯಲ್ಲಿ ''ಕೊಂದವರು ಯಾರು?'' ಎಂಬ ಹೆಸರಿನಲ್ಲಿ ಜನಸಾಮಾನ್ಯರು, ಯುವಕರು ಮತ್ತು ಸಾಮಾಜಿಕ ಹೋರಾಟಗಾರರು ಒಂದಾಗಿ ಬೃಹತ್ ಸಂಘಟನೆಯನ್ನು ರೂಪಿಸಿದರು. ಈ ಸಂಘಟನೆಯು ಪ್ರಕರಣದ ಸತ್ಯಾಸತ್ಯತೆಯನ್ನು ಹೊರತರಲು ಹತ್ತಾರು ಹಂತದ ಹೋರಾಟಗಳನ್ನು ಹಮ್ಮಿಕೊಂಡಿತು.

ಸೌಜನ್ಯಗೆ ನ್ಯಾಯ ಸಿಗಲೇಬೇಕು ಮತ್ತು ಕೊಲೆಗಾರರನ್ನು ತಕ್ಷಣ ಪತ್ತೆ ಹಚ್ಚಿ ಎಂಬ ಬೇಡಿಕೆಯನ್ನಿಟ್ಟುಕೊಂಡು ರಾಜ್ಯದ ವಿವಿಧ ಭಾಗಗಳಲ್ಲಿ ವ್ಯಾಪಕ ಸಹಿ ಅಭಿಯಾನವನ್ನು ನಡೆಸಲಾಯಿತು. ಲಕ್ಷಾಂತರ ಸಾರ್ವಜನಿಕರು ಈ ಅಭಿಯಾನದಲ್ಲಿ ಭಾಗವಹಿಸಿ ತಮ್ಮ ಬೆಂಬಲ ಸೂಚಿಸಿದರು. ಪ್ರಕರಣಕ್ಕೆ ಮರು ಜೀವ ನೀಡಲು ಮತ್ತು ಉನ್ನತ ಮಟ್ಟದ ಸ್ವತಂತ್ರ ತನಿಖೆ ನಡೆಸಲು ಒತ್ತಾಯಿಸಿ ಸಂಘಟನೆಯ ನೇತೃತ್ವದಲ್ಲಿ ಅಂದಿನ ರಾಜ್ಯ ಮುಖ್ಯಮಂತ್ರಿಗಳಿಗೆ ಹಾಗೂ ಕೇಂದ್ರ ನಾಯಕಿ ಸೋನಿಯಾ ಗಾಂಧಿ ಅವರಿಗೆ ಮನವಿ ಪತ್ರಗಳನ್ನು ಬರೆದು ಒತ್ತಡ ಹೇರಲಾಯಿತು. ಸೌಜನ್ಯ ಹೋರಾಟದ ಚರಿತ್ರೆಯಲ್ಲಿ ಬೆಳ್ತಂಗಡಿ ಚಲೋ ಒಂದು ಪ್ರಮುಖ ಮೈಲಿಗಲ್ಲಾಯಿತು. ಸಾವಿರಾರು ಜನರು ರಸ್ತೆಗಿಳಿದು ನಡೆಸಿದ ಈ ಬೃಹತ್ ಕಾಲ್ನಡಿಗೆ ಜಾಥಾ ಮತ್ತು ಪ್ರತಿಭಟನಾ ಸಮಾವೇಶವು ಸರ್ಕಾರದ ಗಮನವನ್ನು ಸೆಳೆಯುವಲ್ಲಿ ಯಶಸ್ವಿಯಾಯಿತು. ಇವೆಲ್ಲವುದರ ನಡುವೆ ಸೌಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಸೌಜನ್ಯ ತಾಯಿ ಸುಪ್ರೀಂ ಮೆಟ್ಟಿಲೇರಿದ್ದರು. ಕೊಂದವರು ಯಾರು ತಂಡವೂ ಅವರ ಬೆಂಬಲಕ್ಕೆ ನಿಂತಿತು.

ಸುಪ್ರೀಂ ಕೋರ್ಟ್ ಮರು ತನಿಖೆಗೆ ಆದೇಶ ನೀಡಿದ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿರುವ ಸಚಿವ ಪ್ರಿಯಾಂಕ್ ಖರ್ಗೆ, ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ ಮತ್ತು ಸಂತ್ರಸ್ತೆ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ. ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನದಂತೆ ತನಿಖಾ ಪ್ರಕ್ರಿಯೆಗಳು ಪಾರದರ್ಶಕವಾಗಿ ನಡೆಯಲಿದ್ದು, ಸತ್ಯಾಂಶ ಹೊರಬರಲಿದೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದ್ದಾರೆ.

ಒಟ್ಟಿನಲ್ಲಿ ಸೌಜನ್ಯ ಕೊಲೆ ಪ್ರಕರಣವು ಕೇವಲ ಒಂದು ಕಾನೂನು ಪ್ರಕ್ರಿಯೆಯಾಗಿ ಉಳಿಯದೆ, ಸಾರ್ವಜನಿಕ ಜಾಗೃತಿ ಮತ್ತು ನ್ಯಾಯದ ಪರವಾದ ಗಟ್ಟಿಯಾದ ಧ್ವನಿಯಾಗಿ ಮಾರ್ಪಟ್ಟಿದೆ. ಸುಪ್ರೀಂ ಕೋರ್ಟ್‌ನ ಈ ಹೊಸ ಆದೇಶವು ಸೌಜನ್ಯ ಕುಟುಂಬಕ್ಕೆ ಮತ್ತು ನ್ಯಾಯಕ್ಕಾಗಿ ಕಾಯುತ್ತಿರುವ ಸಾರ್ವಜನಿಕರಿಗೆ ಹೊಸ ಭರವಸೆಯನ್ನು ಮೂಡಿಸಿದೆ.

ಡಿಬಿ ಕುಪ್ಪೆ-ಬಾವಲಿ ನಡುವಿನ ಕಳಪೆ ರಸ್ತೆ ಕಾಮಗಾರಿ

₹20 ಕೋಟಿ ವೆಚ್ಚದ ರಸ್ತೆ ವರ್ಷ ತುಂಬುವ ಮುನ್ನವೇ ಕಿತ್ತುಬಂತು; ಕಾಕನಕೋಟೆ ಅರಣ್ಯದಲ್ಲಿ ಕಾಮಗಾರಿ ನಿಯಮಗಳ ಪಾಲನೆಯಾಗಿದೆಯೇ?. ಸಾರ್ವಜನಿಕರ ತೆರಿಗೆ ಹಣದಿಂದ ಕೋಟ್ಯಂತರ ರೂಪಾಯಿ ವೆಚ್ಚ ಮಾಡಿ ನಿರ್ಮಿಸಿರುವ ರಸ್ತೆ ವರ್ಷ ತುಂಬುವ ಮುನ್ನವೇ ಹದಗೆಟ್ಟಿರುವುದು ಸರ್ಕಾರಿ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ರಾಜ್ಯ ಹೆದ್ದಾರಿ-33ರ ಕೊರಟಗೆರೆಯಿಂದ ಬಾವಲಿಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ₹2,000 ಲಕ್ಷ ಅಂದರೆ ₹20 ಕೋಟಿ ವೆಚ್ಚ ಮಾಡಲಾಗಿದೆ. ಆದರೆ, ಕಾಮಗಾರಿ ಪೂರ್ಣಗೊಂಡು ಒಂದು ವರ್ಷವೂ ಕಳೆಯುವ ಮುನ್ನವೇ ಹಲವು ಕಡೆ ಡಾಂಬರು ಕಿತ್ತುಬಂದು, ರಸ್ತೆ ಗುಂಡಿಗಳಿಂದ ಕೂಡಿರುವ ಆರೋಪ ಕೇಳಿಬಂದಿದೆ. ಅದರಲ್ಲೂ ಡಿಬಿ ಕುಪ್ಪೆ ವ್ಯಾಪ್ತಿಯಲ್ಲಿ ಸರಿ ಸುಮಾರು 10ಕಿಮೀ ವ್ಯಾಪ್ತಿಯ ರಸ್ತೆ ಒಂದು ವರ್ಷದ ಅವಧಿಯಲ್ಲಿ ಹಾಳಾಗಿದೆ ಎಂಬುದು ಗಂಭೀರ ಆರೋಪ.

ಇನ್ನಷ್ಟು ವಿಶೇಷ ಲೇಖನಗಳಿಗಾಗಿ, ಇಲ್ಲಿ ಕ್ಲಿಕ್ ಮಾಡಿ

ಸೌಜನ್ಯಳನ್ನು ಕೊಂದವರು ಯಾರು? ಹೊಸ ತನಿಖೆಯಲ್ಲಿ ಉತ್ತರ ಸಿಗುವ...ಕತ್ತಲೆಯಿಂದ ಬೆಳಕಿನತ್ತ ಸೌಜನ್ಯ ಹೋರಾಟ: ಸುಪ್ರೀಂ ಆದೇಶದೊಂದಿಗೆ ಮೂಡಿದ...

ವಿಜಯಪುರ ಮಳೆ ಕೊರತೆಯಿಂದ ಮೇವಿಗೂ ಬರ: ಜಾನುವಾರು... ಈ ರಸ್ತೆ ಮೈಸೂರು ಜಿಲ್ಲೆಯ ಹುಣಸೂರು ವಿಶೇಷ ವಿಭಾಗದ ಇಇ ಕಚೇರಿ ವ್ಯಾಪ್ತಿಗೆ ಬರುತ್ತದೆ. ಅಧಿಕೃತ ದಾಖಲೆಗಳ ಪ್ರಕಾರ -817ರ ಅಡಿಯಲ್ಲಿ -33ರ ಚೈನೇಜ್ 213.37ರಿಂದ 278.77 ಕಿ.ಮೀ.ವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ. ಕರಾರು ಸಂಖ್ಯೆ 121/2024-25, ದಿನಾಂಕ 03-12-2024ರಂತೆ ಕಾಮಗಾರಿ ಮೈಸೂರಿನ ಯೋಗಾನಂದ ಅವರಿಗೆ ವಹಿಸಲಾಗಿದೆ .

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR